# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 158 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 05–01–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 158 | Title- Code: KARKAN 28269 | Chitradurga | Date: 05-01-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಸಿರಿಧಾನ್ಯ ಬಳಸಿ ಆರೋಗ್ಯ ಕಾಪಾಡಿಕೊಳ್ಳಿ ನೂರು ವರ್ಷ ಬದುಕಿ ಜಿಲ್ಲಾಧಿಕಾರಿ 2
ಲಸಿಕೆ ಹಾಕಿಸಿ ಮಾರಕ ರೋಗಗಳಿಂದ ಮಕ್ಕಳ ರಕ್ಷಿಸಿ: ಎನ್.ಎಸ್.ಮಂಜುನಾಥ್ 3
ಮಾನವನ ಆಚರಣೆಯಲ್ಲಿವೆ ಧರ್ಮದ ಉಳಿವು ಅಳಿವು: ಸ್ವಾಮೀಜಿ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ


# ಚಿತ್ರದುರ್ಗ ಕ್ಷೇತ್ರಕ್ಕೆ ನಾನು ಆಕಾಂಕ್ಷಿ

## ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಯುವ ಸಹಾಯ ಹಸ್ತ ಕಾರ್ಯಕ್ರಮದಲ್ಲಿ ವಿನಯ್ ತಿಮ್ಮಾಪುರ

» ಚಿತ್ರದುರ್ಗ

ಕಾಂಗ್ರೆಸ್ ಸರ್ಕಾರದ ಐದು ಗ್ಯಾರೆಂಟಿಗಳು ಪ್ರತಿ ಮನೆಗೆ ತಲುಪಿದೆಯೋ ಇಲ್ಲವೋ ಎನ್ನುವುದನ್ನು ಸಮೀಕ್ಷೆ ನಡೆಸಿ ಎಂದು ಯುವ ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ವಿನಯ್ ತಿಮ್ಮಾಪುರ ಯೂತ್ ಕಾಂಗ್ರೆಸ್ ಕಾರ್ಯಕರ್ತರಿಗೆ ಸೂಚಿಸಿದರು.

ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯಿಂದ ಕಾಂಗ್ರೆಸ್ ಕಚೇರಿಯಲ್ಲಿ ಗುರುವಾರ ನಡೆದ ಯುವ ಸಹಾಯ ಹಸ್ತ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.




ತಳಮಟ್ಟದಿಂದ ಯೂತ್ ಕಾಂಗ್ರೆಸ್‌ನ್ನು ಸಂಘಟಿಸಬೇಕಿದೆ. ದೇಶಕ್ಕೆ ಕಾಂಗ್ರೆಸ್ ಕೊಡುಗೆ ಅಪಾರ. ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರು ಸಂವಿಧಾನ ನೀಡಿರುವುದರಿಂದ ಎಲ್ಲರೂ ಸ್ವಾಭಿಮಾನದಿಂದ ಬದುಕುತ್ತಿದ್ದಾರೆ. ಜಾತಿ ಧರ್ಮಗಳ ನಡುವೆ ಸಂಘರ್ಷವನ್ನುಂಟು ಮಾಡುತ್ತಿರುವ ಕೋಮುವಾದಿ ಬಿಜೆಪಿ.ಯಿಂದ ದೇಶದಲ್ಲಿ ಯುವಕರಿಗೆ ಉದ್ಯೋಗವಿಲ್ಲದಂತಾಗಿದೆ. ಬೆಲೆ ಏರಿಕೆಯಿಂದ ಜನಸಾಮಾನ್ಯರು ತತ್ತರಿಸುತ್ತಿದ್ದಾರೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ನಾನು ಕೂಡ ಆಕಾಂಕ್ಷಿ. ಆದರೆ ಹೈಕಮಾಂಡ್ ಯಾರಿಗೆ ಟಿಕೇಟ್ ನೀಡುತ್ತದೋ ಅವರ ಪರವಾಗಿ ಯುವ ಕಾಂಗ್ರೆಸ್ ಕಾರ್ಯಕರ್ತರು ಪ್ರಾಮಾಣಿಕವಾಗಿ ಕೆಲಸ ಮಾಡುವಂತೆ ಮನವಿ ಮಾಡಿದರು.

ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕಾರೇಹಳ್ಳಿ ಉಲ್ಲಾಸ್ ಮಾತನಾಡಿ ನಲವತ್ತು ಪರ್ಸೆಂಟ್ ಕಮೀಷನ್ ಸರ್ಕಾರವನ್ನು ರಾಜ್ಯದ ಜನ ತೊಲಗಿಸಿ ಕಾಂಗ್ರೆಸ್ ಪಕ್ಷಕ್ಕೆ ಅಧಿಕಾರ ನೀಡಿದ್ದಾರೆ. ವಿಧಾನಸಭೆ ಚುನಾವಣೆ ಪೂರ್ವದಲ್ಲಿಯೇ ಸಿದ್ದರಾಮಯ್ಯನವರು ಪ್ರಣಾಳಿಕೆಯಲ್ಲಿ ಹೊರಡಿಸಿದಂತ ಐದು ಗ್ಯಾರೆಂಟಿಗಳನ್ನು ನೀಡಿದ್ದಾರೆ. ಇದರಿಂದ ಬಡವರಿಗೆ ದೀನ ದಲಿತರಿಗೆ ಅನುಕೂಲವಾಗಿದೆ. ಇನ್ನೇನು ಮೂರ್ನಾಲ್ಕುತಿಂಗಳುಗಳಲ್ಲಿಪಾರ್ಲಿಮೆಂಟ್ ಚುನಾವಣೆ ಎದುರಾಗಲಿದೆ. ಕಾಂಗ್ರೆಸ್ ಗ್ಯಾರೆಂಟಿ ಯೋಜನೆಗಳು ಪ್ರತಿ ಮನೆಗೆ ತಲುಪಿದೆಯೋ ಇಲ್ಲವೋ ಎನ್ನುವುದನ್ನು ವಿಚಾರಿಸಿ ಪಕ್ಷದ ಕಾರ್ಯಕ್ರಮಗಳನ್ನು ಫಲಾನುಭವಿಗಳಿಗೆ ಮುಟ್ಟಿಸುವ ಜವಾಬ್ದಾರಿ ಯೂತ್ ಕಾಂಗ್ರೆಸ್ ಕಾರ್ಯಕರ್ತರುಗಳ ಮೇಲಿದೆ ಎಂದು ಹೇಳಿದರು.

ಸೇವಾದಳದ ರಾಜ್ಯ ಉಪಾಧ್ಯಕ್ಷ ಪ್ರಕಾಶ್ ಮಾತನಾಡಿ ಜಿಲ್ಲಾ ಮಟ್ಟದಲ್ಲಿ ಸೇವಾದಳ ಅಸ್ತಿತ್ವದಲ್ಲಿರಬೇಕು. ನಮಗೆ ಬೇಕಿರುವುದು ರಾಮ ರಾಜ್ಯವೇ ಹೊರತು ರಾಮ ಮಂದಿರವಲ್ಲ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಗ್ಯಾರೆಂಟಿಯಿಂದ ಜನ ಸುಖವಾಗಿದ್ದಾರೆ. ಪಾರ್ಲಿಮೆಂಟ್ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವ ಮೂಲಕ ರಾಹುಲ್‌ಗಾಂಧಿರವರ ಕೈಬಲಪಡಿಸುವಂತೆ ವಿನಂತಿಸಿದರು.ಜಿಲ್ಲಾ ಯುವ ಕಾಂಗ್ರೆಸ್ ಉಪಾಧ್ಯಕ್ಷ ವಸೀಂ ಮಾತನಾಡುತ್ತ ಯುವ ಕಾಂಗ್ರೆಸ್ ಕಾರ್ಯಕರ್ತರು ಕಾಂಗ್ರೆಸ್ ಸರ್ಕಾರದ ಐದು ಗ್ಯಾರೆಂಟಿಗಳನ್ನು ಪ್ರತಿ ಮನೆ ಮನೆಗೆ ಮುಟ್ಟಿಸಬೇಕು. ವಾರ್ಡ್, ಬೂತ್‌ಗಳಲ್ಲಿ ಕಾರ್ಯಕರ್ತರು ಪಕ್ಷದ ಯೋಜನೆಗಳ ಬಗ್ಗೆ ತಿಳಿಸಿ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಗೆಲುವು ತಂದು ಕೊಡುವ ಹೊಣೆಗಾರಿಕೆ ನಿಮ್ಮ ಹೆಗಲ ಮೇಲಿದೆ ಎಂದು ತಿಳಿಸಿದರು. ಯೂತ್ ಕಾಂಗ್ರೆಸ್ ಗ್ರಾಮಾಂತರ ಬ್ಲಾಕ್ ಅಧ್ಯಕ್ಷ ತಿಪ್ಪೇಸ್ವಾಮಿ, ಅಫೀಜ್, ಕಾಂಗ್ರೆಸ್ ಮೀನುಗಾರಿಕೆ ವಿಭಾಗದ ಅಧ್ಯಕ್ಷ ಶಶಿಕಿರಣ್ ವೇದಿಕೆಯಲ್ಲಿದ್ದರು.



ದೆಹಲಿಯ ವಿಮಾನ ನಿಲ್ದಾಣದಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿನ್ ತೆಂಡೂಲ್ಕರ್ ಅವರನ್ನು ಆಕಸ್ಮಿಕವಾಗಿ ಭೇಟಿಯಾಗಿ ಕುಶಲೋಪಹರಿ ವಿಚಾರಿಸಿದ ಸಂದರ್ಭ.



ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಶಾಸಕ ಟಿ. ರಘುಮೂರ್ತಿ ಅವರು ಇಂದು ಲೋಕೋಪಯೋಗಿ ಇಲಾಖೆ ಸಚಿವರು ಹಾಗೂ ನಾಯಕ ಸಮಾಜದ ನಾಯಕರಾದ ಸತೀಶ್ ಜಾರಕಿಹೊಳಿ ಅವರನ್ನು ಬೆಂಗಳೂರಿನ ಅವರ ಗೃಹ ಕಛೇರಿಯಲ್ಲಿ ಭೇಟಿ ಮಾಡಿ ಹೊಸ ವರ್ಷದ ಶುಭಾಷಯ ಕೋರಿದರು. ಈ ಸಂದರ್ಭದಲ್ಲಿ ಕೆ.ಪಿ.ಸಿ.ಸಿ. ಕಾರ್ಯಾಧ್ಯಕ್ಷ ಚಂದ್ರಪ್ಪ , ಶಾಸಕ ಬಿ.ಜಿ. ಗೋವಿಂದಪ್ಪ, ಕೆ.ಪಿ.ಸಿ.ಸಿ.ಸದಸ್ಯ ರಾಮಪ್ಪ, ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ ತರಬೇತಿ ಸಂಸ್ಥೆ ಪ್ರಾಂಶುಪಾಲರಾಗಿ ಡಾ.ಈ.ಸತೀಶ್ ನೇಮಕ

» ಚಿತ್ರದುರ್ಗ



ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸೇವೆಗೆ ಸೇರಿದ ಡಾ.ಈ. ಸತೀಶ್, ಹಿರಿಯ ತಜ್ಞರು, ಜಿಲ್ಲಾ ಆಸ್ಪತ್ರೆ ಚಿತ್ರದುರ್ಗ ಇವರನ್ನು ಸಾರ್ವಜನಿಕ ಹಾಗೂ ಆಡಳಿ ತಾತ್ಮಕ ಹಿತದೃಷ್ಟಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಪ್ರಾಂಶುಪಾಲರು, ಜಿಲ್ಲಾ ತರಬೇತಿ ಸಂಸ್ಥೆ, ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ, ಚಿತ್ರದುರ್ಗ ಜಿಲ್ಲೆ ಇಲ್ಲಿನ ಖಾಲಿ ಹುದ್ದೆಗೆ ವರ್ಗಾಯಿಸಿ ಆದೇಶಿಸಿದೆ. ವೈದ್ಯರು ವರ್ಗಾಯಿಸಿದ ಸ್ಥಳದಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವ ಬಗ್ಗೆ, ಸಂಬಂಧಪಟ್ಟವರೆಲ್ಲರಿಗೂ ಪ್ರಭಾರ ವರ್ಗಾವಣೆ ಪ್ರಮಾಣ ಪತ್ರ (ಸಿ.ಟಿ.ಸಿ)ವನ್ನು ಸಲ್ಲಿಸತಕ್ಕದ್ದು. (ಮಾನ್ಯ ಮುಖ್ಯಮಂತ್ರಿಯವರಿಂದ ಅನುಮೋದಿತ) ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮಾಡಲಾಗಿದೆ ಎಂದು ತಿಳಿಸಲಾಗಿದೆ.

### ೮ರಂದು ದಿಶಾ ಸಮಿತಿ ಸಭೆ

» ಚಿತ್ರದುರ್ಗ

ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆ ಇದೇ ಜನವರಿ 8 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಲಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರು ಹಾಗೂ ಸಂಸದರಾದ ಎ. ನಾರಾಯಣಸ್ವಾಮಿ ಅವರು ಸಭೆಯ ಅಧ್ಯಕ್ಷತೆ ವಹಿಸುವರು. ಸಭೆಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಆಗಸ್ಟ್ 2023 ರಿಂದ ಅಕ್ಟೋಬರ್ 2023 ರವರೆಗನ ಅವಧಿಯ ಪ್ರಗತಿ ಪರಿಶೀಲನೆ ನಡೆಯಲಿದೆ ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್ ತಿಳಿಸಿದ್ದಾರೆ.

### ಜಿಲ್ಲಾ ನ್ಯಾಯಾಲಯದಲ್ಲಿ ಉಪನ್ಯಾಸ ಮಾಲಿಕೆ

» ದಾವಣಗೆರೆ

ಜಿಲ್ಲಾ ವಕೀಲರ ಸಂಘ, ದಾವಣಗೆರೆ ವತಿಯಿಂದ ನ್ಯಾಯದಾಣದ ಪ್ರಕ್ರಿಯೆಯಲ್ಲಿ ವಕೀಲರ ವೃತ್ತಿ ಕೌಶಕ್ತಗಳು ಕುರಿತ ಉಪನ್ಯಾಸ ಮಾಲಿಕೆ–5ನ್ನು ನಗರದ ವಕೀಲರ ಸಾಂಸ್ಕೃತಿಕ ಭವನದಲ್ಲಿ ಜನವರಿ 5ರ ಮಧ್ಯಾಹ್ನ 2.30ಕ್ಕೆ ಆಯೋಜಿಸಲಾಗಿದೆ. ಅಡಿಷನಲ್ ಸಾಲಿಸಿಟರ್ ಜನರಲ್ ಆಫ್ ಇಂಡಿಯಾದ ಕೆ.ಅರವಿಂದ್ ಕಾಮತ್ ಕಾರ್ಯಕ್ರಮ ಉದ್ಘಾಟಿಸಿ, ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರಯ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ, 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಜೆ.ವಿ.ವಿಜಯಾನಂದ, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶಿವಪ್ಪ ಗಂಗಪ್ಪ ಸಲಗರೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ್ ಆಗಮಿಸಲಿದ್ದು, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್.ಅರು□□ಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಸಂಘದ ಉಪಾಧ್ಯಕ್ಷ ಜಿ.ಕೆ.ಬಸವರಾಜ್ ಗೋಪನಾಳು, ಕಾರ್ಯದರ್ಶಿ ಎಸ್.ಬಸವರಾಜು, ಸಹ ಕಾರ್ಯದರ್ಶಿ ಎ.ಎಸ್. ಮಂಜುನಾಥ್ ಹಾಗೂ ಜಿಲ್ಲಾ ವಕೀಲರ ಸಂಘದ ಕಾರ್ಯಕಾರಿ ಸಮಿತಿ ಸದಸ್ಯರು ತಿಳಿಸಿದ್ದಾರೆ.




## ಫಾಸ್ಟ್ ನ್ಯೂಸ್

### ವ್ಯಕ್ತಿ ಕಾಣೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಬಹದ್ದೂರಘಟ್ಟ ಗ್ರಾಮದ ನಿವಾಸಿ ಹನುಮಂತಪ್ಪ (80) ಎಂಬ ವ್ಯಕ್ತಿಯು 2023ರ ಡಿಸೆಂಬರ್ 23ರಂದು ಕಾಣೆಯಾಗಿರುವ ಪ್ರಕರಣ ಭರಮಸಾಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.ಕಾಣೆಯಾದ ವ್ಯಕ್ತಿಯ ಚಹರೆ ಇಂತಿದೆ. ಹನುಮಂತಪ್ಪ ತಂದೆ ಲೇಟ್ ತಿಪ್ಪೇರುದ್ರಪ್ಪ, ಸುಮಾರು 80 ವರ್ಷ, 5.5 ಅಡಿ ಎತ್ತರ, ದುಂಡು ಮುಖ, ಗೋಧಿ ಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ಬಳಿ ಪಂಚೆ, ಬಿಳಿ ಶರ್ಟ್ ಅನ್ನು ಧರಿಸಿರುತ್ತಾರೆ.ಈ ಮೇಲ್ಕಂಡ ಚಹರೆಯುಳ್ಳ ವ್ಯಕ್ತಿಯ ಕುರಿತು ಮಾಹಿತಿ ತಿಳಿದುಬಂದಲ್ಲಿ ಭರಮಸಾಗರ ಪೊಲೀಸ್ ಠಾಣೆಗೆ ಸಂಪರ್ಕಿಸಬೇಕು ಎಂದು ಭರಮಸಾಗರ ಪೊಲೀಸ್ ಠಾಣೆ ಪೊಲೀಸ್ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪಡಿತರ ಧಾನ್ಯ ಹಂಚಿಕೆ

» ದಾವಣಗೆರೆ

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯಲ್ಲಿನ ಪಡಿತರ ಚೀಟಿದಾರರಿಗೆ ಜನವರಿ ಮಾಹೆಗೆ ಅನ್ವಯವಾಗುವಂತೆ ಪಡಿತರ ಧಾನ್ಯ ಹಂಚಿಕೆ ಮಾಡಲಾಗಿದೆ.ಅಂತ್ಯೋದಯ ಪಡಿತರ ಚೀಟಿದಾರರಿಗೆ ಕಾರ್ಡ್‍ಗೆ 21 ಕೆ.ಜಿ ಅಕ್ಕಿ ಮತ್ತು 14 ರಾಗಿ, ಆದ್ಯತಾ ಹಾಗೂ ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ 3 ಕೆ.ಜಿ ಅಕ್ಕಿ ಮತ್ತು ಪ್ರತಿ ಸದಸ್ಯರಿಗೆ 2ಕೆ.ಜಿ ರಾಗಿ ಉಚಿತವಾಗಿ ವಿತರಿಸಲಾಗುತ್ತದೆ. ಹಾಗೂ ಪ್ರತಿ ಕೆ.ಜಿ ಗೆ ರೂ.15ರಂತೆ ಒಪ್ಪಿಗೆ ನೀಡಿದ ಎ.ಪಿ.ಎಲ್ ಏಕ ಸದಸ್ಯ ಪಡಿತರ ಚೀಟಿದಾರರಿಗೆ 5 ಕೆ.ಜಿ, ಎರಡು ಮತ್ತು ಹೆಚ್ಚಿನ ಸದಸ್ಯರನ್ನು ಹೊಂದಿರುವವರಿಗೆ 10 ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು. ಸರ್ಕಾರದ ಗ್ಯಾರಂಟಿ ಯೋಜನೆಯಡಿ 5 ಕೆ.ಜಿ ಅಕ್ಕಿ ಬದಲಾಗಿ ಪಡಿತರ ಚೀಟಿದಾರರಿಗೆ ನೇರ ನಗದು ವರ್ಗಾವಣೆ ಮಾಡುತ್ತಿದ್ದು, ಯಾವುದೇ ರೀತಿಯ ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ಹತ್ತಿರದ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಪರಿಹರಿಸಿಕೊಳ್ಳಬಹುದೆಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರು ಸಿದ್ರಾಮ ಮರಿಹಾಳ್ ತಿಳಿಸಿದ್ದಾರೆ

### ಮಹಾನಗರಪಾಲಿಕೆಯ ಆಯ ವ್ಯಯ ಸಭೆ ನಾಳೆ

» ದಾವಣಗೆರೆ

ಪ್ರಸಕ್ತ ಸಾಲಿನ ಆಯ ವ್ಯಯ ಅಂದಾಜು ಪಟ್ಟಿ ತಯಾರಿಸಲು ಮಹಾನಗರಪಾಲಿಕೆಯ ಮಹಾಪೌರರ ಅಧ್ಯಕ್ಷತೆಯಲ್ಲಿ ಜ.6 ರಂದು ಬೆಳಿಗ್ಗೆ 11 ಗಂಟೆಗೆ ಮಹಾನಗರಪಾಲಿಕೆ ಕೌನ್ಸಿಲ್ ಸಭಾಂಗಣದಲ್ಲಿ ಎರಡನೇ ಸಭೆಯನ್ನು ಆಯೋಜಿಸಲಾಗಿದೆ ಎಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

### ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಜಿಲ್ಲಾ ಸಂಘದಿಂದ ನಿವೃತ್ತ ನೌಕರರ ದಿನಾಚರಣೆ, ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಸಮಾರಂಭ ಜ. 5 ರ ಇಂದು ಬೆಳಿಗ್ಗೆ 10-30 ಕ್ಕೆ ತ.ರಾ.ಸು. ರಂಗಮಂದಿರದಲ್ಲಿ ನಡೆಯಲಿದೆ.ವಿಶ್ರಾಂತ ನ್ಯಾಯಮೂರ್ತಿ ಹೆಚ್.ಬಿಲ್ಲಪ್ಪ ಸಮಾರಂಭ ಉದ್ಘಾಟಿಸಲಿದ್ದಾರೆ. ನಿವೃತ್ತ ನೌಕರರ ಜಿಲ್ಲಾ ಸಂಘದ ಅಧ್ಯಕ್ಷ ಆರ್.ರಂಗಪ್ಪರೆಡ್ಡಿ ಅಧ್ಯಕ್ಷತೆ ವಹಿಸುವರು.ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಕಲ್ಯಾಣಾಧಿಕಾರಿ ಶ್ರೀಮತಿ ಎ.ಎಂ.ವೀಣಾ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆಗೊಳಿಸುವರು. ನಿವೃತ್ತ ಸರ್ಕಾರಿ ನೌಕರರ ಸಂಘದ ಗೌರವಾಧ್ಯಕ್ಷ ವೈ.ಚಂದ್ರಶೇಖರಯ್ಯ, ಕಾರ್ಯಾಧ್ಯಕ್ಷ ಎಂ.ಶಿವಾನಂದಪ್ಪ, ಸಲಹಾ ಮಂಡಳಿ ಅಧ್ಯಕ್ಷ ಬಿ.ಬಡಮಲ್ಲಪ್ಪ, ಸಾಂಸ್ಕೃತಿಕ ಮತ್ತು ಮನೋರಂಜನಾ ಕೇಂದ್ರದ ಅಧ್ಯಕ್ಷ ಕೆ.ವಾಸುದೇವರೆಡ್ಡಿ, ಮುಖ್ಯ ಇಂಜಿನಿಯರ್ ಕೆ.ಜಿ.ಜಗದೀಶ್, ಬಸವೇಶ್ವರ ಪುನರ್ ಜ್ಯೋತಿ ಐ ಬ್ಯಾಂಕ್‍ನ ಸ್ಥಾಪಕ ಅಧ್ಯಕ್ಷೆ ಗಾಯತ್ರಿ ಶಿವರಾಂ, ಮೋಕ್ಷರುದ್ರಸ್ವಾಮಿ, ಬುದ್ದ ನ್ಯಾಷನಲ್ ಫೆಲೋಶಿಪ್ ಪ್ರಶಸ್ತಿ ಪುರಸ್ಕೃತ ಪಿ.ನಾಗರಾಜ್ ಇನ್ನು ಮುಂತಾದವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆಂದು ನಿವೃತ್ತ ನೌಕರರ ಸಂಘದ ಜಿಲ್ಲಾ ಕಾರ್ಯದರ್ಶಿ ಎಂ.ರಂಗಪ್ಪ ತಿಳಿಸಿದ್ದಾರೆ.

### ಬಾಲಕಾರ್ಮಿಕ ಪದ್ಧತಿ: ಅನಿರೀಕ್ಷಿತ ದಾಳಿ ಕೈಗೊಳ್ಳಿ

» ಚಿತ್ರದುರ್ಗ

ಬಾಲಕಾರ್ಮಿಕರಹೋಬಳಿವಾರುಟಾಸ್ಕ್‍ಪೋರ್ಸ್ ಕಮಿಟಿ ರಚಿಸಲಾಗಿದ್ದು, ಈ ಕಮಿಟಿ ಅಧಿಕಾರಿಗಳು ತಿಂಗಳಿಗೊಂದು ದಿನ ಬಾಲ ಕಾರ್ಮಿಕರ ಅನಿರೀಕ್ಷಿತ ದಾಳಿ ಕೈಗೊಳ್ಳುವಂತೆ ಹೊಸದುರ್ಗ ತಹಶೀಲ್ದಾರ್ ತಿರುಪತಿ ಪಾಟೀಲ್ ಹೇಳಿದರು. ಹೊಸದುರ್ಗ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಗುರುವಾರ ತಾಲ್ಲೂಕು ಬಾಲಕಾರ್ಮಿಕ ಪುನರ್ವಸತಿ ಸಮಿತಿ, ಟಾಸ್ಕ್‍ಫೋರ್ಸ್ ಹಾಗೂ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ತಂಡದ ವ್ಯಾಪ್ತಿಯಲ್ಲಿ ಬರುವ, ಬಾರ್, ರೆಸ್ಟೋರೆಂಟ್, ಗ್ಯಾರೇಜ್, ಕಟ್ಟಡ ನಿರ್ಮಾಣ, ಪೌಲ್ಟ್ರಿಫಾರ್ಮ್‍ನಲ್ಲಿ ಅನಿರೀಕ್ಷಿತ ದಾಳಿಯನ್ನು ನಡೆಸಿ ಬಾಲ ಕಾರ್ಮಿಕ ಮಕ್ಕಳು ಕಂಡುಬಂದರೆ ತಕ್ಷಣ ತಪ್ಪಿತಸ್ಥ ಮಾಲೀಕರಿಗೆ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

# ಸಿರಿಧಾನ್ಯ ಬಳಸಿ ಆರೋಗ್ಯ ಕಾಪಾಡಿಕೊಳ್ಳಿ ನೂರು ವರ್ಷ ಬದುಕಿ ಜಿಲ್ಲಾಧಿಕಾರಿ ಡಾ.ವೆಂಕಟೇಶ್




» ದಾವಣಗೆರೆ

ಸಾವಿರಾರು ವರ್ಷಗಳಿಂದ ಪಾರಂಪರಿಕವಾಗಿ ನಮ್ಮ ಪೂರ್ವಜರು ಸಿರಿಧಾನ್ಯ ಸೇವನೆ ಮಾಡಿಕೊಂಡು ಬಂದು ಗಟ್ಟಿಮುಟ್ಟಾಗಿ ಹಾಗೂ ದೀರ್ಘಾಯುಷ್ಯದಿಂದ ಬದುಕುತ್ತಿದ್ದಾರೆ. ಆರೋಗ್ಯ ಕಾಪಾಡಲು ಜೋಳ, ರಾಗಿ, ನವಣೆ, ಸಜ್ಜೆ, ಊದಲು ಮುಂತಾದ ಸಿರಿಧಾನ್ಯಗಳನ್ನು ಬಳಸಿ ಎಂದು ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ತಿಳಿಸಿದರು.

ನಗರದಜಯದೇವವೃತ್ತದಲ್ಲಿಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ , ಕೃಷಿಕ ಸಮಾಜದ ಸಹಯೋಗದೊಂದಿಗೆ ಅಂತರಾಷ್ಟ್ರೀಯ ಸಿರಿಧಾನ್ಯ ವರ್ಷಚರಣೆ ಪ್ರಯುಕ್ತ ನಡೆದ ಸಿರಿಧಾನ್ಯ ನಡಿಗೆ ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಸಿರಿಧಾನ್ಯದಲ್ಲಿ ಕ್ಯಾಲ್ಸಿಯಂ, ಮತ್ತು ಎಲ್ಲಾ ರೀತಿಯ ವಿಟಮಿನ್‍ಗಳಿವೆ. ಒಬ್ಬ ಮನುಷ್ಯನ ಬಲವರ್ಧನೆಗೆ ಬೇಕಾಗಿರುವಂತಹ ಎಲ್ಲಾ ಪೋಷಕಾಂಶಗಳು ಸಿರಿಧಾನ್ಯದಲ್ಲಿವೆ. ಯಾರು ಸಿರಿಧಾನ್ಯ ಸೇವನೆ, ಮಾಡುತ್ತಾರೆಯೋ ಅವರು ನೂರು ವರ್ಷಗಳ ಕಾಲ ದೀರ್ಘಾಯುಷ್ಯದಿಂದ ಬದುಕಿರುವಂತಹ ಉದಾಹರಣೆಗಳಿವೆ. ನಮ್ಮ ಜೀವನ ಪದ್ಧತಿ ಆಧಾರಿಸಿದ ಖಾಯಿಲೆಗಳಾದ ಸಕ್ಕರೆ ಖಾಯಿಲೆ, ಬಿಪಿ, ಹೃದಯ ತೊಂದರೆ, ಕಿಡ್ನಿ ಸಮಸ್ಯೆ ಇವುಗಳು ಸಿರಿಧಾನ್ಯಗಳನ್ನು ಸೇವನೆಯಿಂದ ಅತೋಟಿಯಲ್ಲಿ ಇಟ್ಟು ಆರೋಗ್ಯ ರಕ್ಷಣೆ ಮಾಡಿಕೊಳ್ಳಬಹುದಾಗಿದೆ. ನಮ್ಮ ಅಂತರಾಷ್ಟ್ರೀಯ ಆಹಾರ ಸಂಸ್ಥೆಯಿಂದ ರಾಜ್ಯ ಸರ್ಕಾರದ ಮನವಿ ಮೇರೆಗೆ ಅಂತರಾಷ್ಟ್ರೀಯ ಮಟ್ಟದಲ್ಲಿ ಸಿರಿಧಾನ್ಯಗಳ ಪ್ರಾಮುಖ್ಯತೆಯನ್ನು ಗುರುತಿಸಿ ಅಂತರಾಷ್ಟ್ರೀಯ ಸಿರಿಧಾನ್ಯ ವರ್ಷ ಎಂದು ಕೂಡಾ ಘೋಷಣೆ ಮಾಡಲಾಗಿದೆ. ರಾಜ್ಯದಲ್ಲಿ ಇದಕ್ಕೆ ಹೆಚ್ಚಿನ ಮಹತ್ವ ತರಲು ಜಾಗೃತಿಗಾಗಿ ಅನೇಕ ಕಾರ್ಯಕ್ರಮ ಆಯೋಜಿಸಲಾಗಿದ್ದು, ಎಲ್ಲಾ ಜಿಲ್ಲೆಯಲ್ಲೂ ಸಿರಿಧಾನ್ಯ ಕಾರ್ಯಕ್ರಮ ನಡೆಯುತ್ತದೆ ಕಾರ್ಯಕ್ರಮ ಮಾಡಿದರೆ ಸಲಾದು ಒಂದಲ್ಲಾ ಒಂದು ರೀತಿಯಲ್ಲಿ ಸಿರಿಧಾನ್ಯ ಸೇವಿಸಿ ದೀರ್ಘಾಯುಷ್ಯರಾಗಿ, ಪರಿಪೂರ್ಣ ಆರೋಗ್ಯವಂತರಾಗಿ ಬದುಕೋಣ ಎಂದು ಕರೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ ಇಟ್ನಾಳ್ ಮಾತನಾಡಿ, ಹಿಂದಿನ ದಿನಗಳಲ್ಲಿ ಒಣ ಪ್ರದೇಶಗಳಲ್ಲಿ ಕಡಿಮೆ ನೀರು ಇರುವಂತಹ ಸ್ಥಳಗಳಲ್ಲಿ ಸಿರಿಧಾನ್ಯಗಳನ್ನು ಬೆಳೆಯುತ್ತಿದ್ದರು. ಆಗ ಈ ಬೆಳೆಯನ್ನು ಬಡವರು ಬೆಳೆಯುವ ಬೆಳೆ ಎಂದು ಹೇಳುತ್ತಿದ್ದರು. ಆದರೆ ಇತ್ತೀಚಿನ ದಿನಗಳಲ್ಲಿ ಸಕ್ಕರೆ ಖಾಯಿಲೆ ಸೇರಿದಂತೆ ಇತರೆ ಖಾಯಿಲೆಗಳಿಂದ ನರಳುತ್ತಿದ್ದಾರೆ. ಅಂತಹ ಖಾಯಿಲೆಗಳನ್ನು ತಡೆಯಬೇಕೆಂದರೆ ಸಿರಿಧಾನ್ಯಗಳನ್ನು ನಿತ್ಯ ಆಹಾರ ಕ್ರಮಗಳಲ್ಲಿ ಬಳಸಬೇಕು. ಸಿರಿಧಾನ್ಯವು ಅಪೌಷ್ಠಿಕತೆಯಿಂದ ಬಳಲುವವರಿಗೆ ಅನುಕೂಲವಾಗಲಿದೆ. ಈ ಹಿನ್ನಲೆಯಲ್ಲಿ ಸಿರಿಧಾನ್ಯ ಬಳಕೆ ಕುರಿತು ಜನರಲ್ಲಿ ಅರಿವು ಮೂಡಿಸಬೇಕು. ಮತ್ತೆ ನಾವುಗಳು ಸಿರಿಧಾನ್ಯಗಳನ್ನು ಬೆಳೆಯಬೇಕು. ರಾಸಾಯನಿಕ ಗೊಬ್ಬರವನ್ನು ಬಳಸದೇ ಇಂತಹ ಬೆಳೆಗಳನ್ನು ಬೆಳೆಯುವುದರಿಂದ ರೋಗಗಳಿಂದ ಮುಕ್ತಿ ಪಡೆಯಲು ಸಾಧ್ಯವಾಗುತ್ತದೆ. ನಮ್ಮ ಜಿಲ್ಲೆಗಳಲ್ಲಿ ಬೆಳೆಯುತ್ತಿದ್ದಾರೆ, ಇದು ಇನ್ನೂ ಹೆಚ್ಚು ಪ್ರದೇಶದಲ್ಲಿ ಬೆಳೆಯಬೇಕು. ಈ ಸಿರಿಧಾನ್ಯ ಕುರಿತು ಬೆಂಗಳೂರಿನ ಅರಮನೆ ಮೈದಾನದಲ್ಲಿ ಮೂರು ದಿನಗಳ ಕಾಲ ಸಿರಿಧಾನ್ಯ ಮೇಳಗಳನ್ನು ಆಯೋಜಿಸಲಾಗಿದೆ ಎಂದರು.

ಜಯದೇವ ಸರ್ಕಲ್‍ನಿಂದ ಸಿರಿಧಾನ್ಯ ನಡಿಗೆ ಪ್ರಾರಂಭಗೊಂಡು ಆರ್.ಎಚ್. ಕಲ್ಯಾಣ ಮಂಟಪ, ಹಳೇ ಪಿ.ಬಿ.ರಸ್ತೆ, ಎ.ವಿ.ಕೆ ಕಾಲೇಜು ರಸ್ತೆ, ರಾಮ್ ಅಂಡ್ ಕೋ ಸರ್ಕಲ್, ಚರ್ಚ್ ರಸ್ತೆ ಮಾರ್ಗವಾಗಿ ಗುಂಡಿ ಸರ್ಕಲ್‍ನಲ್ಲಿ ಮಾನವ ಸರಪಳಿ ನಿರ್ಮಿಸಿ ಕಾಸಲ್ ಶ್ರೀನಿವಾಸ್ ಶೆಟ್ಟಿ ಪಾರ್ಕ್ ರಸ್ತೆ ಮುಖಾಂತರ ಎಸ್.ನಿಜಲಿಂಗಪ್ಪ ಬಡಾವಣೆಯಲ್ಲಿರುವ ಸರ್ಕಾರಿ ನೌಕರರ ಭವನದಲ್ಲಿ ಮುಕ್ತಾಯವಾಯಿತು.

ಅಪರಜಿಲ್ಲಾಧಿಕಾರಿಪಿ.ಎನ್.ಲೋಕೇಶ್, ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಶ್ರೀನಿವಾಸ್ ಚಿಂತಾಲ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಚಿತ್ರದುರ್ಗ: ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ದಿಢೀರ್ ಭೇಟಿ, ಪರಿಶೀಲನೆ





» ಚಿತ್ರದುರ್ಗ

ಪ್ರಸವಪೂರ್ವ ಮತ್ತು ಗರ್ಭಪೂರ್ವ ಭ್ರೂಣಲಿಂಗ ಪತ್ತೆ ನಿಷೇಧ ಕಾಯ್ದೆ (ಪಿಸಿ & ಪಿಎನ್‍ಡಿಟಿ)ಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ರಾಜ್ಯ ಸಕ್ಷಮ ಪ್ರಾಧಿಕಾರ ಹಾಗೂ ಜಿಲ್ಲಾ ತಪಾಸಣಾ ಮತ್ತು ಪರಿಶೀಲನಾ ಸಮಿತಿಯು ಪಿಸಿ&ಪಿಎನ್‍ಡಿಟಿ ತಂಡದೊಂದಿಗೆ ಚಿತ್ರದುರ್ಗ ನಗರದ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್‍ಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿತು, ಅಲ್ಲದೆ ಅಲ್ಲಿ ಕಂಡುಬಂದ ಕೆಲವು ನ್ಯೂನತೆಗಳನ್ನು ಸರಿಪಡಿಸಿಕೊಳ್ಳಲು ಸೂಚನೆ ನೀಡಿತು.

ಪಿಸಿ&ಪಿಎನ್‍ಡಿಟಿ ಕಾಯ್ದೆ ಪರಿಣಾಮಕಾರಿ ಅನುಷ್ಠಾನ ಸಂಬಂಧ ರಾಜ್ಯ ಸಕ್ಷಮ ಪ್ರಾಧಿಕಾರ ಪಿಡಿಆರ್‌ಸಿಹೆಚ್ ಡಾ.ಶ್ರೀನಿವಾಸ್, ಜಿಲ್ಲಾ ತಪಾಸಣಾ ಮತ್ತು ಪರಿಶೀಲನಾ ಸಮಿತಿಯ ಅಧ್ಯಕ್ಷ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಜಿ.ಪಿ.ರೇಣುಪ್ರಸಾದ್ ಹಾಗೂ ಸಮಿತಿಯ ಸದಸ್ಯರಾದ ಡಾ. ಸತ್ಯನಾರಾಯಣ, ವಿಷಯ ನಿರ್ವಾಹಕ ಹೆಚ್.ಬಿ.ಪೂಜಾರ್ ಅವರು ಚಿತ್ರದುರ್ಗ ನಗರದ ಕೀರ್ತಿ ಹಾಸ್ಪಿಟಲ್, ಆಫಿಯಾ ಆಸ್ಪತ್ರೆ ಮತ್ತು ಹಿಂದ್ ಲ್ಯಾಬ್‍ನ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್‍ಗಳಿಗೆ ಅನಿರೀಕ್ಷಿತವಾಗಿ ಭೇಟಿ ನೀಡಿ, ಪರಿಶೀಲನೆ ನಡೆಸಲಾಯಿತು.

ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಮಷಿನ್‍ಗೆ ಸಂಬಂಧಿಸಿದಂತಹ ಎನ್‍ಎಸ್‍ಸಿ ರಿಜಿಸ್ಟರ್, ರೆಫರಲ್ ಸ್ಲಿಪ್‍ಗಳು ಹಾಗೂ ಎಂಟಿಪಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳ ಪರಿಶೀಲಿಸಲಾಯಿತು.

## ಚಿತ್ರದುರ್ಗದಲ್ಲಿ ಜ.6ಕ್ಕೆ ಮಡಿವಾಳರ ಕಾಯಕ ಜನೋತ್ಸವ

» ದಾವಣಗೆರೆ



ಮುಂಬರುವ 2024 ಜನವರಿ 6ರಂದು ಚಿತ್ರದುರ್ಗದ ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಮಠದ ಕುರುಬರ ಹಟ್ಟಿ ಸಮೀಪ ಬರುವ ಜಗದ್ಗುರು ಶ್ರೀಮಾಚಿದೇವ ಮಹಾಸಂಸ್ಥಾನ ಮಠ, ಮಡಿವಾಳ ಗುರುಪೀಠದ ವತಿಯಿಂದ ಕಾಯಕ ಜನೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಶ್ರೀ ಮಠದ ಪ್ರಕಟಣೆ ತಿಳಿಸಿದೆ.ಶ್ರೀಮಠದ ಶಂಕುಸ್ಥಾಪನೆ 15ನೇ ವಾರ್ಷಿಕೋತ್ಸವ, ಮಹಾಸ್ವಾಮಿಗಳವರ ಜಂಗಮದೀಕ್ಷೆಯ 25ನೇ ಹಾಗೂ 40ನೇ ಜನ್ಮದಿನದ ವಾರ್ಷಿಕೋತ್ಸವ ಮತ್ತು ಜಗದ್ಗುರು ಶ್ರೀ ಡಾ.ಬಸವ ಮಾಚಿದೇವ ಮಹಾಸ್ವಾಮಿಗಳವರ 6ನೇ ಪಟ್ಟಾಧಿಕಾರ ಮಹೋತ್ಸವದ ಅಂಗವಾಗಿ ಸಾಂಕೇತಿಕವಾಗಿ ಕಾಯಕ ಜನೋತ್ಸವ-2024 ಹಮ್ಮಿಕೊಳ್ಳಲಾಗಿದೆ.ಬೆಳಿಗ್ಗೆ 9ಕ್ಕೆ ಶ್ರೀ ಮಾಚಿದೇವ ಆಧ್ಯಾತ್ಮಿಕ ಮಂದಿರದಲ್ಲಿ ಮಾಚಿದೇವರ ಪೂಜಾ ಕೈಂಕರ್ಯಗಳು, ಸಾಮೂಹಿಕ ವಚನ ಪ್ರಾರ್ಥನೆ, 9.30ಕ್ಕೆ ಶ್ರೀಮಠದ ಆವರಣದಲ್ಲಿ ಶ್ರೀ ಮಾಚಿದೇವರ ಮೂರ್ತಿ ಮತ್ತು ವಚನ ಗ್ರಂಥಗಳ ಪಲ್ಲಕ್ಕಿ ಉತ್ಸವ ಹಾಗೂ ಮೆರವಣಿಗೆ, ಬೆಳಿಗ್ಗೆ 11ಕ್ಕೆ ವಿಶ್ವಕ್ಕೆ ಮಾಚಿದೇವರ ಕೊಡುಗೆಗಳು ಕುರಿತು ಅನುಭಾವ ಉಪನ್ಯಾಸ ನೀಡಲಾಗುವುದು.ಶ್ರೀಮಠದಲ್ಲಿ ಈ ಹಿಂದೆ ಕರೆಯಲಾಗಿದ್ದ ರಾಜ್ಯಮಟ್ಟದ ಸಭೆಗಳಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದ್ದು, ರಾಜ್ಯದಲ್ಲಿ 161 ತಾಲೂಕುಗಳು ತೀವ್ರ ಬರಪೀಡಿತ ಹಾಗೂ 34 ತಾಲೂಕುಗಳು ಸಾಧಾರಣ ಬರಪೀಡಿತ ಎಂದು ರಾಜ್ಯ ಸರ್ಕಾರ ಘೋಷಿಸಿರುತ್ತದೆ. ಆದ್ದರಿಂದ ಎರಡು ದಿನಗಳ ಕಾಲ ನಡೆಸಲಾಗುತ್ತಿದ್ದ 2024ರ ಕಾಯಕ ಜನೋತ್ಸವವನ್ನು ಒಂದು ದಿನಕ್ಕೆ ಸೀಮಿತಗೊಳಿಸಿ, ಸಂಪ್ರದಾಯದಂತೆ ಶ್ರೀಮಠದಲ್ಲಿ ವಚನ ಪಲ್ಲಕ್ಕಿ ಉತ್ಸವ ಮತ್ತು ಶ್ರೀಮಾಚಿದೇವ ಆಧ್ಯಾತ್ಮಿಕ ಮಂದಿರದಲ್ಲಿ ಮಾಚಿದೇವರ ಆರಾಧನೆಯನ್ನು ನಡೆಸಲು ಸಭೆಯು ತೀರ್ಮಾನಿಸಿದೆ.ರಾಜ್ಯದಲ್ಲಿ ಶೇ.98ರಷ್ಟು ಮಡಿವಾಳ ಸಮುದಾಯವು ಕುಲಕಸುಬು,ಕೂಲಿ ಮಾಡಿಕೊಂಡು ಜೀವನ ನಡೆಸುತ್ತಿರುವ ಹಿನ್ನೆಲೆಯಲ್ಲಿ ಆರ್ಥಿಕ ಸ್ಥಿತಿಗತಿಗಳ ಆಧಾರ ಮೇಲೆ ನಮ್ಮಲ್ಲಿ ಜಮೀನ್ದಾರರು ಸೇರಿದಂತೆ ಉಳ್ಳವರು ಇಲ್ಲದ ಕಾರಣ ಆಡಂಬರದ ಕಾರ್ಯಕ್ರಮಗಳು, ದುಂದುವೆಚ್ಚದ ಕಾರ್ಯಕ್ರಮಗಳು ಅನಾವಶ್ಯಕ ಎಂದು ಪರಿಗಣಿಸಿ ಸಭೆಯಲ್ಲಿ ಈ ನಿರ್ಧಾ ಕೈಗೊಳ್ಳಲಾಗಿದೆ. ಸಮುದಾಯವು ಕಷ್ಟ, ಬವಣೆಗೆ ಒಳಗಾಗಬಾರದು ಎನ್ನುವ ಕಾರಣಕ್ಕಾಗಿ ಅಲ್ಲದೇ ಮಠದ ಎಲ್ಲ ಕಾರ್ಯಗಳು ನಡೆಯಬೇಕಾದ ಕಾರಣ ಕಾಯಕ ಜನೋತ್ಸವವನ್ನು ಸರಳವಾಗಿ ಆಚರಣೆ ಮಾಡಲು ನಿರ್ಧರಿಸಲಾಗಿದೆ.ಆದಕಾರಣ ಕಾಯಕ ಜನೋತ್ಸವಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಮುದಾಯದ ಜನತೆ ಆಗಮಿಸಬೇಕು ಎಂದು ಮಡಿವಾಳ ಮಾಚಿದೇವ ಮಹಾಸಂಸ್ಥಾನ ಗುರುಪೀಠದ ಜಗದ್ಗುರು ಶ್ರೀಬಸವ ಮಾಚಿದೇವ ಮಹಾಸ್ವಾಮಿಗಳು ತಿಳಿಸಿದ್ದಾರೆ.

## ರಾಜ್ಯ ಬಿಜೆಪಿ ವಕ್ತಾರರಾಗಿ ಎಂಎಲ್ಸಿ ಕೆ.ಎಸ್.ನವೀನ್ ನೇಮಕ

» ಚಿತ್ರದುರ್ಗ




ಚಿತ್ರದುರ್ಗ -ದಾವಣಗೆರೆ ವಿಧಾನ ಪರಿಷತ್ ಸದಸ್ಯರಾದ ಕೆ ಎಸ್ ನವೀನ್ ಅವರನ್ನು ಕರ್ನಾಟಕ ಬಿಜೆಪಿಯ ವಾಕ್ತಾರರಾಗಿ ರಾಜ್ಯಾಧ್ಯಕ್ಷರಾದ ಬಿ ವೈ ವಿಜಯೇಂದ್ರ ಅವರು ನೇಮಕ ಮಾಡಿದ್ದಾರೆ . ಇವರು ಈ ಹಿಂದೆ ಸಂಘ ಪಾರಿವಾರದ ಧರ್ಮ ಜಾಗರಣ ದಲ್ಲಿ ಸೇವೆ ಸಲ್ಲಿಸಿದ್ದು ನಂತರ ಬಿಜೆಪಿಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ, ನಂತರ 2017 ರಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷರಾಗಿ ಸೇವೆಸಲ್ಲಿಸಿ ಯಶಸ್ವಿಯಾಗಿ ಕಾರ್ಯ ನಿರ್ವಹಿಸಿದ್ದಾರೆ. ನಂತರ 2019 ಬಿಜೆಪಿ ರಾಜ್ಯ ಕಾರ್ಯದರ್ಶಿಗಳಾಗಿ, ತುಮಕೂರು, ದಾವಣಗೆರೆ ಚಿತ್ರದುರ್ಗ ಜಿಲ್ಲೆಗಳ ಪ್ರಭಾರಿಯಾಗಿ ತದನಂತರ 2021 ವಿಧಾನ ಪರಿಷತ್ ಸದಸ್ಯರಾಗಿ ಚುನಾಯಿತ ರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

**ಪ್ರಮುಖ ಸುದ್ದಿ**

# ರಾಗಿಮಸಲವಾಡದ ಈಶ್ವರ ದೇವಸ್ಥಾನಕ್ಕೆ ಕಾಯಕಲ್ಪ

ವಿಜಯನಗರ ಜಿಲ್ಲೆಯ ಹರಪನಹಳ್ಳಿ ತಾಲ್ಲೂಕಿನ ಪುಟ್ಟ ಗ್ರಾಮ ರಾಗಿಮಸಲವಾಡದಲ್ಲಿ ಪುರಾತನವಾದ ದೊಡ್ಡ ಈಶ್ವರ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯವು ದಾವಣಗೆರೆಯ ಸಮಾಜಸೇವಕರಾದ ಶ್ರೀಮತಿ ಮಹದೇವಮ್ಮ ಮಲ್ಲಿಕಾರ್ಜುನಪ್ಪ ಅವರ ನೇತೃತ್ವದಲ್ಲಿ ನಡೆಯುತ್ತಿದೆ . ಸುಮಾರು 40 ಲಕ್ಷ ರೂಪಾಯಿಗಳ ವೆಚ್ಚದಲ್ಲಿ ದೇವಸ್ಥಾನದ ಪುನರ್ ನಿರ್ಮಾಣ ಕಾರ್ಯ ಭರದಿಂದ ಸಾಗಿದೆ . ಅನೇಕ ದಾನಿಗಳು ಧನಸಹಾಯ ಮಾಡುತ್ತಿದ್ದಾರೆ . ಧರ್ಮಸ್ಥಳ ಕ್ಷೇತ್ರದ ಗ್ರಾಮೀಣಾಭಿವೃದ್ಧಿ ಯೋಜನೆಯಿಂದ ಎರಡೂವರೆ ಲಕ್ಷ ರೂಪಾಯಿಗಳ ನೆರವು ದೊರೆತಿದೆ . ಕೊಡಗೈ ದಾನಿ ಹಾಗೂ ದಾವಣಗರೆಯ ಹಿರಿಯ ಶಾಸಕರಾದ ಡಾ . ಶಾಮನೂರು ಶಿವಶಂಕರಪ್ಪ, ಹರಪನಹಳ್ಳಿ ಶಾಸಕರಾದ ಶ್ರೀಮತಿ ಲತಾ ಅವರೂ ಸಹಾ ಸರ್ಕಾರದಿಂದ ಅಥವಾ ವೈಯಕ್ತಿಕವಾಗಿ ಧನಸಹಾಯ ಮಾಡುವ ಭರವಸೆ ನೀಡಿದ್ದಾರೆ ಈಗಾಗಲೇ ದೇವಸ್ಥಾನದ ಆವರಣದಲ್ಲಿ ವೃದ್ಧಾಶ್ರಮ





ಆರಂಭಿಸಲು ನಾಲ್ಕು ಕೊಠಡಿಗಳನ್ನು ನಿರ್ಮಿಸಲಾಗಿದೆ . ಅಡುಗೆ ಕೋಣೆ , ಸ್ನಾನಗೃಹ ಮತ್ತು ಶೌಚಾಲಯಗಳನ್ನು ಕಟ್ಟಲಾಗಿದೆ , 24 ಗಂಟೆಗಳ ಕಾಲ ನೀರಿನ ಸೌಲಭ್ಯವಿದೆ , ದೇವಸ್ಥಾನದ ಸುತ್ತಲೂ ಹಸಿರು ವಾತಾವರಣ ಉಂಟುಮಾಡಲು ತೆಂಗಿನ ಸಸಿ ಹಾಗೂ ಇತರೆ ಸಸಿಗಳನ್ನು ನೀಡಲಾಗಿದೆ. ಈ ಪ್ರದೇಶವನ್ನು ಸುಂದರ ಪ್ರವಾಸಿ ತಾಣವನ್ನಾಗಿ ಮಾಡಲು ದೇವಸ್ಥಾನದ ಟ್ರಸ್ಟ್ ಶ್ರಮಿಸುತ್ತಿದೆ . ಅನೇಕ ದಾನಿಗಳು, ಜನಪ್ರತಿನಿಧಿಗಳು ಇಲ್ಲಿಗೆ ಭೇಟಿ ನೀಡಿ ನೂತನ ದೇವಸ್ಥಾನದ ನಿರ್ಮಾಣಕಾರ್ಯವನ್ನು ವೀಕ್ಷಿಸಿ ತಮ್ಮ ಮೆಚ್ಚುಗೆ ವ್ಯಕ್ತಪಡಿಸಿ , ತಮ್ಮ ಕೈಲಾದ ಧನಸಹಾಯ ನೀಡುವ ವಾಗ್ದಾನ ಮಾಡುತ್ತಿದ್ದಾರೆ .

ಹನಿ ಹನಿಗೂಡಿದರೆ ಹಳ್ಳ , ತೆನೆ ತೆನೆಗೂಡಿದರೆ ಬಳ್ಳ ಎಂಬಂತೆ ದಾನಿಗಳು ನೀಡುವ ಹಣದಿಂದ ದೇವಸ್ಥಾನ ನಿರ್ಮಾಣ ಕಾರ್ಯ ನಡೆಯುತ್ತಿದೆ . ತಮ್ಮ ಮೂರೂವರೆ ಎಕರೆ ಜಮೀನಿನಲ್ಲಿ ಕೃಷಿಕಾರ್ಯದ ಜೊತೆಗೆ ದೇವಸ್ಥಾನ ನಿರ್ಮಾಣ ಕಾರ್ಯವನ್ನು ಶ್ರೀಮತಿ ಮಹದೇವಮ್ಮನವರು ಹೆಚ್ಚಿನ ಆಸಕ್ತಿಯಿಂದ ಕೈಗೊಂಡಿದ್ದಾರೆ . ದೇವಸ್ಥಾನದ ನಿರ್ಮಾಣ ಕಾರ್ಯವನ್ನು ಹೆಚ್ಚಿನ ಜನರು ನೋಡಿ ಧನಸಹಾಯವನ್ನು ಹೆಚ್ಚಿನ ಪ್ರಮಾಣದಲ್ಲಿ ನೀಡಿದರೆ ತ್ವರಿತಗತಿಯಲ್ಲಿ ದೇವಸ್ಥಾನದ ಕಾರ್ಯವನ್ನು ಪೂರ್ಣಗೊಳಿಸಿ,ನೂತನ ದೇವಸ್ಥಾನವನ್ನು ಶೀಘ್ರವೇ ಲೋಕಾರ್ಪಣೆಗೊಳಿಸಬಹುದು ಎಂಬ ಆಶಾಭಾವನೆಯನ್ನು ಶ್ರೀಮತಿ ಮಹದೇವಮ್ಮ ಅವರು ಹೊಂದಿದ್ದಾರೆ . ದೇವಸ್ಥಾನದ ನಿರ್ಮಾಣ ಕಾರ್ಯವನ್ನು ಧನಸಹಾಯ ಮಾಡುವವರು ಶ್ರೀಮತಿ ಮಹದೇವಮ್ಮನವರ ಮೊಬೈಲ್ ಸಂಖ್ಯೆಗೆ ( 9844584855 ) ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದು .ಹರಪನಹಳ್ಳಿ ತಾಲ್ಲೂಕಿನ ರಾಗಿಮಸಲವಾಡಕ್ಕೆ ಗ್ರಾಮದ ಹೊರವಲಯದಲ್ಲಿರುವ ದೊಡ್ಡ ಈಶ್ವರ ದೇವಸ್ಥಾನಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದೆ

» **ಡಾ . ರಾಜಶೇಖರ್ ಇತಿಹಾಸ ಸಂಶೋಧಕರು ಚಿತ್ರದುರ್ಗ**

## ಫಾಸ್ಟ್ ನ್ಯೂಸ್

### ವ್ಯಕ್ತಿ ಕಾಣೆ

» ಚಿತ್ರದುರ್ಗ

ಶಿವಮೊಗ್ಗ ತಾಲ್ಲೂಕು ನವುಲೆ ಹೊಸೂರು ಬಡಾವಣೆ ಸವಳಂಗ ರಸ್ತೆಯ ನಿವಾಸಿ ಪ್ರಕಾಶ (36) ಎಂಬ ವ್ಯಕ್ತಿಯು 2023ರ ಮೇ 16ರಂದು ಕಾಣೆಯಾಗಿರುವ ಪ್ರಕರಣ ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಪ್ರಕಾಶ್ ಎಂಬ ವ್ಯಕ್ತಿಯ ಹೊಳಲ್ಕೆರೆ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯಿಂದ ಕಾಣೆಯಾಗಿರುತ್ತಾರೆ. ಕಾಣೆಯಾದ ವ್ಯಕ್ತಿಯ ಚಹರೆ ಇಂತಿದೆ. ಪ್ರಕಾಶ ತಂದೆ ನರಸಿಂಹಪ್ಪ, ಸುಮಾರು 36 ವರ್ಷ, 5 ಅಡಿ ಎತ್ತರವಿದ್ದು, ದುಂಡು ಮುಖ, ದೃಢಕಾಯ ಶರೀರ ಹೊಂದಿರುತ್ತಾರೆ. ಈ ಮೇಲ್ಕಂಡ ಚಹರೆಯುಳ್ಳ ವ್ಯಕ್ತಿಯ ಕುರಿತು ಮಾಹಿತಿ ತಿಳಿದುಬಂದಲ್ಲಿ ಹೊಳಲ್ಕೆರೆ ಪೊಲೀಸ್ ಠಾಣೆಗೆ ಸಂಪರ್ಕಿಸಬೇಕು ಎಂದು ಹೊಳಲ್ಕೆರೆ ಪೊಲೀಸ್ ಠಾಣೆ ಪೊಲೀಸ್ ಉಪನಿರೀಕ್ಷಕರು ತಿಳಿಸಿದ್ದಾರೆ.


### ಜ.05 ರಂದು ಗ್ರಾಹಕರ ಸಮಸ್ಯೆ ಮತ್ತು ಹಕ್ಕುಗಳ ಜಾಗೃತಿ ಕಾರ್ಯಗಾರ

» ಚಿತ್ರದುರ್ಗ

ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನಾಶಾಸ್ತ್ರ ಇಲಾಖೆ, ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರ, ಕರ್ನಾಟಕ ಕುಂಬಾರ ಮಹಿಳಾ ಮಹಾಸಭಾದ ವತಿಯಿಂದ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸ್ತ್ರೀ-ಶಕ್ತಿ, ಸ್ವ-ಸಹಾಯ ಸಂಘದ ಸದಸ್ಯರುಗಳಿಗೆ ಗ್ರಾಹಕರ ಸಮಸ್ಯೆ ಮತ್ತು ಹಕ್ಕುಗಳ ಜಾಗೃತಿ ಕಾರ್ಯಾಗಾರವನ್ನು ಇದೇ ಜನವರಿ 5ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ತಾಲ್ಲೂಕಿನ ಬಳ್ಳೇಕಟ್ಟೆಯ ಕುಂಬಾರ ಗುಂಡಯ್ಯ ಮಹಾಸಂಸ್ಥಾನದಲ್ಲಿ ಹಮ್ಮಿಕೊಳ್ಳಲಾಗಿದೆ. ತೆಲಸಂಗ ಕುಂಬಾರ ಗುಂಡಯ್ಯ ಮಹಾಸಂಸ್ಥಾನದ ಬಸವ ಕುಂಬಾರ ಗುಂಡಯ್ಯ ಸ್ವಾಮಿಗಳು, ಚಿತ್ರದುರ್ಗ ಕುಂಬಾರ ಗುಂಡಯ್ಯ ಮಹಾಸಂಸ್ಥಾನದ ಬಸವಮೂರ್ತಿ ಕುಂಬಾರ ಸ್ವಾಮಿಗಳು ಸಾನಿಧ್ಯ ವಹಿಸುವರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷೆ ಹೆಚ್.ಎನ್. ಮೀನಾ ಉದ್ಘಾಟಿಸುವರು. ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕ ಕೆ.ಪಿ. ಮಧುಸೂದನ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಸದಸ್ಯೆ ಬಿ.ಹೆಚ್.ಯಶೋಧ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಹನುಮಂತಪ್ಪ, ಕಾನೂನು ಮಾಪನಾಶಾಸ್ತ್ರ ಇಲಾಖೆ ಸಹಾಯಕ ನಿಯಂತ್ರಕ ಎಂ. ಗುರುಪ್ರಸಾದ್, ಭರಮಸಾಗರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎನ್. ಸುಧಾ, ಕುಂಬಾರ ಗುಂಡಯ್ಯ ಮಹಾ ಸಂಸ್ಥಾನದ ಅಧ್ಯಕ್ಷ ಕೆ.ಚಂದ್ರಪ್ಪ, ಕರ್ನಾಟಕ ಕುಂಬಾರ ಮಹಿಳಾ ಮಹಾಸಭಾ ಅಧ್ಯಕ್ಷೆ ಎಸ್. ಬೈಲಮ್ಮ, ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರ ಜಿಲ್ಲಾ ಸಂಯೋಜಕ ತಮಟಕಲ್ಲು ಬಿ. ಹನುಮಂತಪ್ಪ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಶ್ರೀಶೈಲ ಆರಾಧ್ಯ ನಿಧನ

» ಚಿತ್ರದುರ್ಗ:



ಇತಿಹಾಸ ಸಂಶೋಧಕ, ನಿವೃತ್ತ ಪ್ರಾಧ್ಯಾಪಕ ಪ್ರೊ. ಶ್ರೀಶೈಲ ಆರಾಧ್ಯ 77 ವರ್ಷ ರವರು ಗುರುವಾರ ಮುಂಜಾನೆ 5:30 ರ ಸುಮಾರಿಗೆ ದಾವಣಗೆರೆಯ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗದವರನ್ನು ಅಗಲಿದ್ದಾರೆ. ನಾಳೆ ಬೆಳಿಗ್ಗೆ ದಾವಣಗೆರೆಯಿಂದ ಅವರ ಮೃತ ದೇಹವನ್ನು ಚಿತ್ರದುರ್ಗದ ಅವರ ನಿವಾಸಕ್ಕೆ ತರಲಾಗುವುದು. ನಂತರ ಸಾರ್ವಜನಿಕರಿಗೆ ಅಂತಿಮ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ. ಮಧ್ಯಾನ್ಹದ ವೇಳೆಗೆ ಜೋಗಿಮಟ್ಟಿ ರಸ್ತೆಯ ವೀರಶೈವ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಶ್ರೀ ಶೈಲ ಆರಾಧ್ಯರ ನಿಧನಕ್ಕೆ ಜಿಲ್ಲೆಯ ಮಠಾಧೀಶರು, ಸಾಹಿತಿಗಳು, ಚಿಂತಕರು, ರಾಜಕೀಯ ಮುಖಂಡರು, ಹಲವಾರು ಸಂಘಸಂಸ್ಥೆಗಳ ಮುಖಂಡರುಗಳು ಸಂತಾಪ ಸೂಚಿಸಿದ್ದಾರೆ.

### ಜಿಲ್ಲಾ ನ್ಯಾಯಾಲಯದಲ್ಲಿ ಉಪನ್ಯಾಸ ಮಾಲಿಕೆ

» ದಾವಣಗೆರೆ

ಜಿಲ್ಲಾ ವಕೀಲರ ಸಂಘ, ದಾವಣಗೆರೆ ವತಿಯಿಂದ ನ್ಯಾಯದಾಣದ ಪ್ರಕ್ರಿಯೆಯಲ್ಲಿ ವಕೀಲರ ವೃತ್ತಿ ಕೌಶಕ್ತಗಳು ಕುರಿತ ಉಪನ್ಯಾಸ ಮಾಲಿಕೆ-5ನ್ನು ನಗರದ ವಕೀಲರ ಸಾಂಸ್ಕೃತಿಕ ಭವನದಲ್ಲಿ ಜನವರಿ 5ರ ಮಧ್ಯಾಹ್ನ 2.30ಕ್ಕೆ ಆಯೋಜಿಸಲಾಗಿದೆ. ಅಡಿಷನಲ್ ಸಾಲಿಸಿಟರ್ ಜನರಲ್ ಆಫ್ ಇಂಡಿಯಾದ ಕೆ.ಅರವಿಂದ್ ಕಾಮತ್ ಕಾರ್ಯಕ್ರಮ ಉದ್ಘಾಟಿಸಿ, ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರಯ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ, 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಜೆ.ವಿ.ವಿಜಯಾನಂದ, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶಿವಪ್ಪ ಗಂಗಪ್ಪ ಸಲಗರೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ್ ಆಗಮಿಸಲಿದ್ದು, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್.ಅರು[illegible]ಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ.

ಲಸಿಕಾ ಕಾರ್ಯಕ್ರಮದಲ್ಲಿ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್

# ಲಸಿಕೆ ಹಾಕಿಸಿ ಮಾರಕ ರೋಗಗಳಿಂದ ಮಕ್ಕಳ ರಕ್ಷಿಸಿ

» ಚಿತ್ರದುರ್ಗ

ಜೀವಕ್ಕೆ ಕಂಟಕವಾಗಿರುವ ಮಾರಕ ರೋಗಳಿಂದ ಮಕ್ಕಳನ್ನು ರಕ್ಷಿಸಲು ಪೋಷಕರು ತಪ್ಪದೇ ಎಲ್ಲಾ ಲಸಿಕೆಗಳನ್ನು ಹಾಕಿಸಬೇಕು ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಮಠದ ಕುರುಬರಹಟ್ಟಿಯ ಅಂಗನವಾಡಿ-"ಎ" ಕೇಂದ್ರದಲ್ಲಿ ಗುರುವಾರ ಹಮ್ಮಿಕೊಂಡಿದ್ದ ದೈನಂದಿನ ಲಸಿಕಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪೋಷಕರು ತಮ್ಮ ಮಕ್ಕಳಿಗೆ ತಪ್ಪದೇ ಲಸಿಕೆಯನ್ನು ಕೊಡಿಸಿ 12 ಮಾರಕ ರೋಗಗಳಿಂದ ರಕ್ಷಣೆ ನೀಡಬೇಕು. ಲಸಿಕೆಗಳು ಎದೆಹಾಲಿನಷ್ಟೇ ಮಹತ್ವವುಳ್ಳದ್ದಾಗಿದೆ. ಬಿಟ್ಟು ಹೋಗಿರುವ ಲಸಿಕಾ ದಿನಚರಿಯನ್ನು ಸರಿಪಡಿಸಿಕೊಳ್ಳಿ ಎಂದು ತಿಳಿಸಿದ ಅವರು, ಅಂತರದ ಹೆರಿಗೆ ಕುಟುಂಬ ಯೋಜನೆ ಅನುಸರಿಸಿಕೊಳ್ಳುವುದು,



ಕುಟುಂಬ ಯೋಜನೆಯಲ್ಲಿ ಪುರುಷರ ಸಹಭಾಗಿತ್ವ ಮಹತ್ವವಾಗಿರುತ್ತದೆ ಎಂದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ ಮಾತನಾಡಿ, ಆಹಾರಗಳು, ಪೋಷಕಾಂಶಗಳು ಮತ್ತು ಅವುಗಳನ್ನು ಒಳಗೊಂಡಿರುವ ಇತರೆ ಪದಾರ್ಥಗಳ ವಿಜ್ಞಾನವೇ ಪೌಷ್ಟಿಕಾಂಶ ಎಂದು ತಿಳಿಸಿದ ಅವರು, ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಪೌಷ್ಟಿಕಾಂಶ ಮತ್ತು ಸಮತೋಲಿತ ಆಹಾರ ಇವುಗಳ ನಡುವಿನ ವ್ಯತ್ಯಾಸ ಗುರುತಿಸುವುದು, ಐದು ವರ್ಷದ ಒಳಗಿನ ಮಕ್ಕಳಲ್ಲಿ ಕಂಡು ಬರುವ ಸಾಧಾರಣ ಅಪೌಷ್ಟಿಕತೆ, ತೀವ್ರ ಅಪೌಷ್ಟಿಕತೆ, ಕುಂಠಿತ ಬೆಳವಣಿಗೆ ಮಾಪನ ಹೇಗೆ ಮಾಡಬೇಕು, ಸಮುದಾಯದಲ್ಲಿ ಅಪೌಷ್ಟಿಕ ಮಕ್ಕಳ ಪತ್ತೆ ಹಚ್ಚುವಿಕೆ ಇರುವಂತಹ ಅವಕಾಶ ಸದುಪಯೋಗಪಡಿಸಿಕೊಳ್ಳಲು ಅಪೌಷ್ಟಿಕ ಮಕ್ಕಳ ಪಟ್ಟಿಯನ್ನು ಮಾಡಿ ಚೈನ್ ವಿಧಾನದಲ್ಲಿ ಮಕ್ಕಳ ಆಹಾರ ಅನುಕ್ರಮಗಳನ್ನ ಹೇಗೆ ಸಿದ್ಧಪಡಿಸಬೇಕು ಎಂದು ತಿಳಿಸಿದರು.

ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ತಪ್ಪದೇ ವಾರಕ್ಕೆ ಎರಡು ಬಾರಿ ಬುಧವಾರ ಮತ್ತು ಶನಿವಾರದಂದು ಕಬ್ಬಿಣಾಂಶದ ಔಷಧಿ ನೀಡಿ ನಿಮ್ಮ ಮಕ್ಕಳನ್ನು ರಕ್ತಹೀನತೆಯಿಂದ ಕಾಪಾಡಿ ಎಂದು ತಿಳಿಸಿದರು.ಹಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿ ಕಾತ್ಯಾಯನಮ್ಮ ಅವರು, ಲಸಿಕಾ ವೇಳಾಪಟ್ಟಿ ಹಾಗೂ ತಾಯಿ ಕಾರ್ಡ್ ಮಹತ್ವದ ಬಗ್ಗೆ ತಿಳಿಸಿದರು.ಇದೇ ಸಂದರ್ಭದಲ್ಲಿ ಲಸಿಕಾ ಅಧಿವೇಶನಕ್ಕೆ ಆಗಮಿಸಿದ ತಾಯಿ ಮಕ್ಕಳಿಗೆ ಕಬ್ಬಿಣಾಂಶದ ಔಷಧಿ ವಿತರಿಸಲಾಯಿತು. ಆರೋಗ್ಯ ಸುರಕ್ಷತಾ ಅಧಿಕಾರಿ ಶಿಲ್ಪ ಮಕ್ಕಳಿಗೆ ವಿವಿಧ ಲಸಿಕೆಗಳನ್ನು ನೀಡಿದರು. ಲಸಿಕಾ ಕಾರ್ಯಕ್ರಮದಲ್ಲಿ ಆಶಾ ಕಾರ್ಯಕರ್ತೆಯರಾದ ನಾಗಮ್ಮ, ಶಿವಮಾಲಾ, ಅಂಗನವಾಡಿ ಕಾರ್ಯಕರ್ತೆ ಬಾನು ಉಪಸ್ಥಿತರಿದ್ದರು.

## ಜಂಬೂದ್ವೀಪ ಮಹಾತ್ಮಪುಲೆ ಅಧ್ಯಯನ ಕೇಂದ್ರದಲ್ಲಿ ಸಾವಿತ್ರಿಬಾಯಿ ಪುಲೆ ಜನ್ಮದಿನಾಚರಣೆ

» ಚಿತ್ರದುರ್ಗ

ಹೆಣ್ಣು ಮಕ್ಕಳಿಗೆ ಶಿಕ್ಷಣ ಕೊಡುವುದರ ಜೊತೆ ಮೌಢ್ಯದ ವಿರುದ್ಧ ಹೋರಾಡಿದ ಮಾತೆ ಸಾವಿತ್ರಿಬಾಯಿ ಪುಲೆ ಭಾರತದ ಮೊಟ್ಟ ಮೊದಲ ಶಿಕ್ಷಕಿ ಎಂದು ಉಪನ್ಯಾಸಕ ಹರಿಯಬ್ಬೆಯ ತಿಪ್ಪೇಶ್ ಟಿ. ಹೇಳಿದರು.

ಜಂಬೂ ದ್ವೀಪ ಕರ್ನಾಟಕ ಮಹಾತ್ಮಪುಲೆ ಅಧ್ಯಯನ ಕೇಂದ್ರದಲ್ಲಿ ಬುಧವಾರ ನಡೆದ ಸಾವಿತ್ರಿಬಾಯಿ ಪುಲೆ ಜನ್ಮದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದರು.

1831 ರಲ್ಲಿ ಮಹಾರಾಷ್ಟ್ರದ ಸತಾರ್ ಜಿಲ್ಲೆಯಲ್ಲಿ ಜನಿಸಿದ ಸಾವಿತ್ರಿಬಾಯಿ ಪುಲೆ ಜನಮಾನಸದಲ್ಲಿ ಚಿರಸ್ಥಾಯಿಯಾಗಿ ಉಳಿದುಕೊಂಡಿದ್ದಾರೆ. ವಿದ್ಯೆ ಎಂದರೆ ಕೇವಲ ಬ್ರಾಹ್ಮಣರ ಸ್ವತ್ತಾಗಿದ್ದ ಕಾಲದಲ್ಲಿ ಹೆಣ್ಣು ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡಬೇಕೆಂಬ ಛಲ ಅವರಲ್ಲಿತ್ತು. ಪ್ರಶ್ನೆ ಮಾಡದೆ ಯಾವುದನ್ನು ಒಪ್ಪಿಕೊಳ್ಳುತ್ತಿರಲಿಲ್ಲ. ಅಂತಹ ಗುಣ ಅವರದು ಎಂದು ಸ್ಮರಿಸಿದರು.

ಹೆಣ್ಣು ಮಕ್ಕಳಿಗೆ ಶಿಕ್ಷಣ ಕೊಡಲು ಹೋಗುತ್ತಿದ್ದ ಸಂದರ್ಭದಲ್ಲಿ ಸಾವಿತ್ರಿಬಾಯಿ ಪುಲೆ ಮೇಲೆ ಕಲ್ಲು, ಮೊಟ್ಟೆ, ಸಗಣಿಯನ್ನು ಎಸೆಯಲಾಗುತ್ತಿತ್ತು. ಇಷ್ಟೆಲ್ಲಾ ಅವಮಾನ ಸಹಿಸಿಕೊಂಡು ಅಕ್ಷರ ಕ್ರಾಂತಿಯನ್ನೇ ಉಂಟು ಮಾಡಿದ್ದರಿಂದ ಭಾರತದ ಮೊಟ್ಟ ಮೊದಲ ಶಿಕ್ಷಕಿ ಎನಿಸಿಕೊಂಡಿದ್ದಾರೆ. ಮನೆ ಮನೆಗೆ ಹೋಗಿ ಹಣ ಬೇಡಿ ನಂತರ ಬ್ರಿಟೀಷರು ಕೊಡುತ್ತಿದ್ದ ಹಣದಿಂದ ಮಕ್ಕಳಿಗೆ ವಿದ್ಯೆ ಕಲಿಸುತ್ತಿದ್ದರು. ದೃಢ ನಿರ್ಧಾರ ದಿಟ್ಟ ನಿಲುವಿತ್ತು. ಮಹಾರಾಷ್ಟ್ರದ ಮರಾಠಿಗರಿಗಷ್ಟೆ ಬೇಕಾದವರಲ್ಲ. ಇಡಿ ಭಾರತದ ಮಹಾನ್ ಚೇತನ ಸಾವಿತ್ರಿಬಾಯಿ ಪುಲೆ ಜ್ಞಾನದಾನ ಶ್ರೇಷ್ಠ




ದಾನ ಎನ್ನುತ್ತಿದ್ದರು. ಶಿಕ್ಷಣದ ಜೊತೆ ಪ್ಲೇಗ್ ರೋಗಿಗಳ ಆರೈಕೆ ಮಾಡುತ್ತಲೆ 1897 ರಲ್ಲಿ ಅಸು ನೀಗಿದರು ಎಂದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ನಿವೃತ್ತ ಅಧಿಕಾರಿ ಡಿ.ಟಿ.ಜಗನ್ನಾತ್ ಸಾವಿತ್ರಿಬಾಯಿ ಪುಲೆ ಜನ್ಮದಿನಾಚರಣೆ ಉದ್ಘಾಟಿಸಿ ಮಾತನಾಡುತ್ತ ಅಕ್ಷರದವ್ವನ ಆಸೆಯಂತೆ ನಾವೆಲ್ಲರೂ ಹೆಚ್ಚು ಹೆಚ್ಚು ಶಿಕ್ಷಣವಂತರಾದಾಗ ಮಾತ್ರ ಸಾವಿತ್ರಿಬಾಯಿ ಪುಲೆರವರ ಶ್ರಮ ಸಾರ್ಥಕವಾಗುತ್ತದೆ. ಇಂತಹ ಕಾರ್ಯಕ್ರಮದಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಹೇಳಿದರು.

ಸಾವಿತ್ರಿಬಾಯಿ ಪುಲೆ ಕೇವಲ ಶಿಕ್ಷಣ ಕಲಿಸುವುದಕ್ಕಷ್ಟೆ ಸೀಮಿತವಾಗಿರಲಿಲ್ಲ. ಮೌಢ್ಯದ ವಿರುದ್ದವೂ ನಿರಂತರವಾಗಿ ಹೋರಾಡಿದ ದಿಟ್ಟ ಮಹಿಳೆ. ಅನೇಕ ಅವಮಾನಗಳನ್ನು ಅನುಭವಿಸಿದರೂ ಹೆಣ್ಣು ಮಕ್ಕಳಿಗೆ ಶಿಕ್ಷಣ ಹೇಳಿಕೊಡುವುದರಿಂದ ಹಿಂದೆ ಸರಿಯಲಿಲ್ಲ. ಅಂತಹ ದೀಮಂತ ಮಹಿಳೆಯ ಹಾದಿಯಲ್ಲಿ ಎಲ್ಲರೂ ಸಾಗಬೇಕಿದೆ ಎಂದು ತಿಳಿಸಿದರು.

ಜಂಬೂ ದ್ವೀಪ ಕರ್ನಾಟಕ ಅಧ್ಯಕ್ಷ ರಾಮಣ್ಣ ಪ್ರಾಸ್ತಾವಿಕವಾಗಿ ಮಾತನಾಡುತ್ತ ಬಾಬಾ ಸಾಹೇಬರ ಚಿತ್ರಗಳನ್ನು ಸಾಕಾರಗೊಳಿಸಬೇಕು ಅನ್ನುವುದಾದರೆ ನಮ್ಮ ಬೇರುಗಳನ್ನು ನಾವು ಗಟ್ಟಿಗೊಳಿಸಿಕೊಳ್ಳಬೇಕಾದ ಅಗತ್ಯವಿದೆ. ಅದಕ್ಕಾಗಿ ಸಂಘಟನೆ ಮುಖ್ಯ. ಸಾವಿತ್ರಿಬಾಯಿ ಪುಲೆರವರ ಆಶಯದಂತೆ ಹೆಣ್ಣು ಮಕ್ಕಳು ಶಿಕ್ಷಣವಂತರಾಗಬೇಕು ಎಂದು ಕರೆ ನೀಡಿದರು.

ಮಲ್ಲಾಡಿಹಳ್ಳಿ ಪ್ರಾಂಶುಪಾಲರಾದ ಆಯುಶ್ಮತಿ ಸಿದ್ದಲಿಂಗಮ್ಮ ಅಧ್ಯಕ್ಷತೆ ವಹಿಸಿದ್ದರು.

ಕೃಷಿ ಅಧಿಕಾರಿ ಡಾ.ಟಿ.ಪಾರ್ವತಮ್ಮ, ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಜಿ ಅಧ್ಯಕ್ಷೆ ಶ್ರೀಮತಿ ಬಿ.ಟಿ.ಲೋಲಾಕ್ಷಮ್ಮ, ಡಾ.ಮೋಹನ್, ರಾಘವೇಂದ್ರ ವೇದಿಕೆಯಲ್ಲಿದ್ದರು.

ಉಪನ್ಯಾಸಕಿ ಡಾ.ಮಮತ, ಮುಖ್ಯ ಶಿಕ್ಷಕ ಹನುಮಂತಪ್ಪ ಇವರುಗಳನ್ನು ಸನ್ಮಾನಿಸಲಾಯಿತು.

## ವಿಜೃಂಭಣೆಯ ಕಡೇ ಕಾರ್ತಿಕ ಶ್ರೀವೀರಭದ್ರಸ್ವಾಮಿ ರಥೋತ್ಸವ



» ಪರಶುರಾಂಪುರ

ಚೌಳೂರು ಗ್ರಾಮದ ಆರಾಧ್ಯದೈವ ಶ್ರೀ ವೀರಭದ್ರಸ್ವಾಮಿ ದೇವರ ಕಡೇ ಕಾರ್ತಿಕೋತ್ಸವ ನಿಮಿತ್ತ ಸ್ವಾಮಿಯ ರಥೋತ್ಸೋವ ಗುರುವಾರ ವಿದ್ಯುಕ್ತವಾಗಿ ಜರುಗಿತು.ಹಬ್ಬದ ಪ್ರಯುಕ್ತ ದೇವಾಲಯಕ್ಕೆ ಹಾಗೂ ಗ್ರಾಮದಲ್ಲಿನ ನಾನಾ ಪ್ರಮುಖ ರಸ್ತೆಗಳಲ್ಲಿ ತಳಿರು ತೋರಣ, ಜಗಜಗಿಸುವ ವಿದ್ಯುತ್ ದೀಪಗಳನ್ನ ಅಳವಡಿಸಲಾಗಿತ್ತು .

**ರಥೋತೋತ್ಸವಕ್ಕೆ ಚಾಲನೆ:** ಈ ಭಾರಿ ಸುಂದರ ಭವ್ಯ ರಥವನ್ನ ಬಣ್ಣದ ಪಟ , ನಾನಾ ಬಗೆಯ ಹೂಗಳಿಂದ ಶೃಂಗರಿಸಲಾಗಿತ್ತು . ಸ್ವಾಮಿಯಯನ್ನ ಸನಿಹದ ವೇದಾವತಿ ನದಿಯಲ್ಲಿ ಗಂಗಾಸ್ನಾನ ಬಳಿಕ ವಿಶೇಷ ಪೂಜೆ , ಅಭಿಷೇಕ ಮಾಡಲಾಯಿತು . ನಂತರ ಜನಪದ ಕಲೆಗಳಾದ ನಂದಿಕೋಲು ಕುಣಿತ , ಟ್ರಾಷ್ , ಕಹಳೆ , ಕೋಲಾಟ ಹಾಗೂ ವಿವಿಧ ಜನಪದ ವಾದ್ಯಗಳ ಜತೆ ಸ್ವಾಮಿಯನ್ನ ಮೆರವಣಿಗೆಯ ಮೂಲಕ ಸಾಂಪ್ರದಾಯದಂತೆ ಗ್ರಾಮದ ಗೌಡರ ವಂಶಸ್ಥರೊಬ್ಬರ ಮನೆಗೆ ಕರೆದೊಯ್ಯಲಾಯಿತು .ಮುಕ್ತಿ ಬಾವುಟ ಈ ಬಾರಿ ಶಿಕ್ಷಕ ರಾಜಣ್ಣ ಒಂದು ಲಕ್ಷದ ಮುವತ್ತು ಸಾವಿರಕ್ಕೆ ಮುಕ್ತಿಬಾವುಟ ಹರಾಜುಪಡೆದ ಬಳಿಕ ರಥಕ್ಕೆ ಹಿರಿಯರು , ಮುಖಂಡರು , ಗಣ್ಯರು ಚಾಲನೆ ನೀಡಿದರು .ಭಕ್ತರು ಹರಕೆ ಹೊತ್ತ ಭಕ್ತರು ಒಪ್ಪತ್ತಿನಿಂದ ಇದ್ದು ತೇರಿನ ಗಾಲಿಗಳಿಗೆ ಕಾಯಿ ಹೊಡೆಯುವುದು ವಿಶೇಷತೆ ಹಾಗೂ ಸೂರುಬೆಲ್ಲ , ಸೂರು ಮೆಣಸು , ಬಾಳೇಹಣ್ಣು , ಉತ್ತುತ್ತಿಯನ್ನ ಭಕ್ತಿಯಿಂದ ತೇರಿನ ಮೇಲೆ ತೂರುತ್ತಾರೆ . ಈ ವೇಳೆ ತೇರಿನಿಂದ ಸಿಕ್ಕ ಬಾಳೆ ಹಣ್ಣು , ಉತ್ತುತ್ತಿ , ಮೆಣಸನ್ನ ಭಕ್ತರು ಪ್ರಸಾದವಾಗಿ ಕಣ್ಣಿಗೆ ಗೊತ್ತಿಕೊಂಡು ಸ್ವೀಕರಿಸುತ್ತಾರೆ . ರಥವನ್ನ ಪಾದಗಟ್ಟೆಯವರೆಗೆ ಎಳೆದ್ಯೋಯ್ದು ಪಾದಗಟ್ಟೆಯ ಬಳಿ ಬಸವಣ್ಣ ದೇರವರಿಗೆ ಪೂಜೆ ಸಲ್ಲಿಸಿದ ಬಳಿಕ ಮೂಲ ಸನ್ನಿದಿಗೆ ಎಳೆತರಲಾಯಿತು . ರಥೋತ್ಸವದ ವೇಳೆ ವಿವಿಧ ಜನಪದ ಕಲೆಗಳು ಜನಮನ ಸೆಳೆದವು .

**ಭಕ್ತರ ಆಗಮನ :** ಸ್ವಾಮಿಯ ಭವ್ಯ ರಥೋತೋತ್ಸವ ಕಣ್ತುಂಬಿಕೊಂಡು ಇಷ್ಟಾರ್ಥ ಹರಕೆ ತೀರಿಸಲು ಗ್ರಾಮವು ಸೇರಿದಂತೆ ರಾಜ್ಯದ ವಿವಿದೆಡೆಯಿಂದ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದರು .

## ಗುರುಸ್ವಾಮಿರಂಗಣ್ಣ ಶಿಷ್ಯವೃಂದಿದ್ದ 33ನೇ ವರ್ಷದ ಪಡಿಪೂಜೆ

» ಚಳ್ಳಕೆರೆ

ನಗರದ ಪುರಸಭೆ ಉದ್ಯಾನವನದಲ್ಲಿ ಕಳೆದ ಸುಮಾರು 33 ವರ್ಷಗಳಿಂದ ಹಿರಿಯ ಸ್ವಾಮೀಜಿ ಪುರಸಭೆಯ ಮಾಜಿ ನೌಕರ, ನಿವೃತ್ತ ಗುರುಸ್ವಾಮಿರಂಗಣ್ಣನವರ ಶಿಷ್ಯರು ಪಡಿಪೂಜಾ ಕಾರ್ಯಕ್ರಮವನ್ನು ಭಕ್ತಿ, ಶ್ರದ್ದೆಯಿಂದ ನಡೆಸಿದರು.

ಪುರಸಭೆ ಉದ್ಯಾನವನದಲ್ಲಿ ನಿರ್ಮಿಸಲಾದ ವಿಶಾಲ ಮಂಟಪದಲ್ಲಿ ಶ್ರೀಅಯ್ಯಪ್ಪಸ್ವಾಮಿ ಸನ್ನಿಧಿಯನ್ನು ನಿರ್ಮಿಸಿ ಸಾವಿರಾರು ಭಕ್ತರ ಸಮ್ಮುಖದಲ್ಲಿ ಪಡಿಪೂಜಾ ಕಾರ್ಯಕ್ರಮವನ್ನು ನಡೆಸಲಾಯಿತು. ಸಂಜೆಯಿಂದಲೇ ಭಜನೆ ಕಾರ್ಯಕ್ರಮದ ನಂತರ ಪೂಜಾ ಕಾರ್ಯಕ್ರಮಗಳು ನಡೆದವು, ಆಗಮಿಸಿದ್ದ ಎಲ್ಲಾ ಭಕ್ತರಿಗೂ ಶ್ರೀಸ್ವಾಮಿಯ ಪ್ರಸಾದ ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಗುರುಸ್ವಾಮಿ, ಶ್ರೀಸ್ವಾಮಿಅಯ್ಯಪ್ಪನ ಕೃಪೆಯಿಂದ ಈ ಭಾಗದಲ್ಲಿ ನಮ್ಮ ಹಿರಿಯರಾದ ರಂಗಪ್ಪನವರು ನಡೆಸಿಕೊಂಡು ಬಂದ ಪೂಜಾ



ಕಾರ್ಯಕ್ರಮಗಳನ್ನು ಮುಂದುವರೆಸಲಾಗಿದೆ. ಪ್ರಸ್ತುತ ಈ ವರ್ಷ 33ನೇ ವರ್ಷದ ಪಡಿಪೂಜೆ ಇದಾಗಿದ್ದು, ನಿರೀಕ್ಷೆಗೂ ಮೀರಿ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದಾರೆ. ಶ್ರೀಅಯ್ಯಪ್ಪಸ್ವಾಮಿ ಎಲ್ಲರಿಗೂ ಒಳ್ಳೆದುಮಾಡಲಿ ಶುಭಹಾರೈಸುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಅಯ್ಯಪ್ಪಸ್ವಾಮಿಗಳಾದ ಕುಮಾರಸ್ವಾಮಿ, ಗೋವಿಂಧಸ್ವಾಮಿ, ವೀರೇಶ್, ರೇವಣ್ಣ, ಹನುಮಂತರಾಯ, ರಮೇಶ್, ಮೋಹನ್, ಮಹಂತೇಶ್, ಬಸವರಾಜು, ದಿವಾಕರ, ವೆಂಕಟೇಶ್, ಅಭಿಷೇಕ್, ಮಾರುತಿ ಮುಂತಾದವರು ಉಪಸ್ಥಿತರಿದ್ದರು.

## ಕೋರ್ಬಿವ್ಯಾಕ್ಸ್ ಲಸಿಕೆ ಪಡೆಯಿರಿ

ಶಿವಮೊಗ್ಗ:ಕೋವಿಡ್-19 ಲಸಿಕೆಯ ಮುನ್ನೆಚ್ಚರಿಕೆ ಡೋಸ್ ಪಡೆಯದೇ ಉಳಿದಿರುವ 60 ವರ್ಷ ಮೇಲ್ಪಟ್ಟವರು, ಕಡಿಮೆ ರೋಗ ನಿರೋಧಕ ಶಕ್ತಿ ಉಳ್ಳವರು ಮತ್ತು ಈ ಹಿಂದೆ ಕೋವಿಡ್-19 ಲಸಿಕೆ ಪಡೆಯದೇ ಇರುವ ಆರೋಗ್ಯ ಕಾರ್ಯಕರ್ತೆಯರು ಮತ್ತು ಈ ಗುಂಪಿಗೆ ಸೇರಿದ ಫಲಾನುಭವಿಗಳು ಜಿಲ್ಲಾಸ್ಪತ್ರೆ ಅಥವಾ ತಾಲ್ಲೂಕು ಆಸ್ಪತ್ರೆಗಳಲ್ಲಿ ಕೋರ್ಬಿವ್ಯಾಕ್ಸ್ ಲಸಿಕೆ ಪಡೆದುಕೊಳ್ಳಬಹುದು. ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಈಗಾಗಲೇ ಜಿಲ್ಲೆಯಲ್ಲಿ ಕೋವಿಡ್ [illegible] 19 ಲಸಿಕಾರಣ ಯಶಸ್ವಿಯಾಗಿ ಅನುಷ್ಠಾನಗೊಂಡಿದೆ. ಆದರೆ ಇತ್ತೀಚೆಗೆ ಕೆಲವು ರಾಜ್ಯಗಳಲ್ಲಿ ಕೋವಿಡ್-19 ಪ್ರಕರಣಗಳು ವರದಿಯಾಗುತ್ತಿರುವ ಹಿನ್ನೆಲೆಯಲ್ಲಿ ಕೋವಿಡ್-19 ಮುನ್ನೆಚ್ಚರಿಕೆ ಡೋಸ್ ಪಡೆದೇ ಇರುವ ಫಲಾನುಭವಿಗಳು ಜಿಲ್ಲಾಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಪಡೆದುಕೊಳ್ಳಬೇಕು. ಜಿಲ್ಲೆಗೆ 820 ಡೋಸ್ ಕೋರ್ಬಿವ್ಯಾಕ್ಸ್ ಕೋವಿಡ್-19 ಲಸಿಕೆ ಸರಬರಾಜಾಗಿದ್ದು ಮುನ್ನೆಚ್ಚರಿಕೆ ಡೋಸ್ ಆಗಿ ಬಳಸಲು ಜಿಲ್ಲಾಧಿಕಾರಿಗಳು ಸೂಚಿಸಿರುತ್ತಾರೆ. ಕೋರ್ಬಿವ್ಯಾಕ್ಸ್ ಕೋವಿಡ್-19 ಲಸಿಕೆಯನ್ನು ವಿಜಾತಿ(ಹೆಟೆರೊಲಾಗಸ್)ಮುನ್ನೆಚ್ಚರಿಕೆ ಡೋಸ್ ಆಗಿ ನೀಡಬಹುದಾಗಿರುತ್ತದೆ.

**ಪ್ರಮುಖ ಸುದ್ದಿ**

# ಗೌರಸಮುದ್ರ: ಖಾತರಿ ಕಾಮಗಾರಿ ವೀಕ್ಷಿಸಿದ ಇಓ ಶಶಿಧರ

» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ಗೌರಸಮುದ್ರ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯಉದ್ಯೋಗಖಾತರಿ ಯೋಜನೆಯಡಿ ಕೈಗೊಂಡ ವಿವಿಧ ಕಾಮಗಾರಿಗಳನ್ನು ತಾಲ್ಲೂಕು ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ ಗುರುವಾರ ವೀಕ್ಷಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸರ್ಕಾರ ಈ ಯೋಜನೆಯಡಿ ಅನುಷ್ಠಾನಗೊಳ್ಳುವ ಎಲ್ಲಾ ಕಾಮಗಾರಿಗಳು ಗುಣಮಟ್ಟದ್ದಾಗಿರಬೇಕು. ಯಾವುದೇ ಕಾಮಗಾರಿಯಲ್ಲಿ ಲೋಪದೋಷ ಉಂಟಾದಲ್ಲಿ ಅಂತಹ ಕಾಮಗಾರಿಗಳ ಬಿಲ್‌ನ್ನು ಪಾವತಿಸಲು ಸಾಧ್ಯವಿಲ್ಲ. ಆದ್ದರಿಂದ ಸಂಬಂಧಪಟ್ಟ ಗುತ್ತಿಗೆದಾರರು ಕಾಮಗಾರಿ ಕೈಗೊಳ್ಳುವ ಸಂದರ್ಭದಲ್ಲಿ ಹೆಚ್ಚು ಜಾಗೃತರಾಗಿರಬೇಕು. ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ



ಯೋಜನೆ ಗ್ರಾಮೀಣ ಭಾಗದ ಬಡ ಕೂಲಿಕಾರ್ಮಿಕರ ಬದುಕಿಗೆ ಹೆಚ್ಚು ಆಸರೆಯಾಗಲಿದ್ದು, ಕಾಮಗಾರಿ ಸಂದರ್ಭದಲ್ಲಿ ಕೂಲಿಕಾರ್ಮಿಕರಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು. ಗ್ರಾಮ ಪಂಚಾಯಿತಿ ಅಧ್ಯಕ್ಷ ಎಂ.ಓಬಣ್ಣ ಮಾತನಾಡಿ, ಒಟ್ಟು 21 ಲಕ್ಷ ಮೌಲ್ಯದ ವಿವಿಧ ಕಾಮಗಾರಿಗಳನ್ನು ವೀಕ್ಷಣೆ ಮಾಡಲಾಗಿದೆ. 10 ಲಕ್ಷ ವೆಚ್ಚದಲ್ಲಿ ಇಕೋಪಾರ್ಕ್, 5.40 ಲಕ್ಷ ವೆಚ್ಚದಲ್ಲಿ ವಾಲಿಬಾಲ್ ಕೋರ್ಟ್, 3.60 ವೆಚ್ಚದಲ್ಲಿ ಖೋ-ಖೋ ಕ್ರೀಡಾಂಗಣ, 2.80 ಲಕ್ಷದಲ್ಲಿ ಕಬ್ಬಡಿ ಕ್ರೀಡಾಂಗಣದ ಕಾಮಗಾರಿ ವೀಕ್ಷಿಸಿದರು. ಇದೇ ಸಂದರ್ಭದಲ್ಲಿ ಶಾಲಾ ವಿದ್ಯಾರ್ಥಿಗಳು ಬೋಜನಾಲಯ, ಸಭಾಂಗಣ ನಿರ್ಮಿಸಿಕೊಡುವಂತೆ ಮನವಿ ಅರ್ಪಿಸಿದರು. ಗ್ರಾಮ ಪಂಚಾಯಿತಿ ಸದಸ್ಯರಾದ ಜಿ.ಎಂ. ಈರಣ್ಣ, ಟಿ.ಶಶಿಕುಮಾರ್, ಸಂಜಯ್‌ಗೌಡ, ಪಿಡಿಓ ಹನುಮಂತರಾಜು, ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ವೈಶಾಲಿ ವಿ.ಎಂ.ಇವರಿಗೆ ಪಿಹೆಚ್‌ಡಿ ಪದವಿ

» ಚಿತ್ರದುರ್ಗ



ಆಹಾರ ತಂತ್ರಜ್ಞಾನ ವಿಷಯದಲ್ಲಿ ಅಧ್ಯಯನ ನಡೆಸಿ, ಸಂಶೋಧನ ಮಹಾ ಪ್ರಬಂಧ ಮಂಡಿಸಿದ ಸಂಶೋಧನಾರ್ಥಿ ವೈಶಾಲಿ ವಿ.ಎಂ. ರವರಿಗೆ ದಾವಣಗೆರೆ ವಿಶ್ವವಿದ್ಯಾನಿಲಯವು ಪಿಹೆಚ್‌ಡಿ ಪದವಿ ನೀಡಿದೆ. ದಾವಣಗೆರೆ ವಿಶ್ವವಿದ್ಯಾನಿಲಯದ ಆಹಾರ ತಂತ್ರಜ್ಞಾನದ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಪ್ರೋ.ಹೆಚ್. ಎಸ್.ರವಿಕುಮಾರ್ ಪಾಟೀಲ್ ಮಾರ್ಗದರ್ಶನ ಮತ್ತು ಕಂಪ್ಯೂಟರ್ ಅಧ್ಯಯನ ವಿಭಾಗದ ಸಹ ಪ್ರಾಧ್ಯಾಪಕ ಡಾ.ಎಂ.ಬಸವಣ್ಣ ಮಾರ್ಗದರ್ಶನದಲ್ಲಿ ಸಂಶೋಧನೆ ನಡೆಸಿ ಪ್ರಬಂದ ಮಂಡಿಸಿದ್ದಾರೆ. ಚಿತ್ರದುರ್ಗ ನೆಹರು ನಗರದ ನಿವಾಸಿ ಸಾರ್ವಜನಿಕ ಶಿಕ್ಷಣ ಇಲಾಖೆಯ ನಿವೃತ್ತ ನೌಕರ ಮಾರುತಿರಾಮಯ್ಯ ಮತ್ತು ಶ್ರೀಮತಿ ಗಂಗಮ್ಮನವರ ಪುತ್ರಿ.

### ಕುಡಿದ ಅಮಲಿನಲ್ಲಿ ಬಂಡೆ ನೀರಿನಲ್ಲಿ ಬಿದ್ದು ವ್ಯಕ್ತಿ ಸಾವು

» ನಾಯಕನಹಟ್ಟಿ

ಹೊಳಲ್ಕೆರೆ ತಾಲ್ಲೂಕಿನ ದಾಸಯ್ಯನಹಟ್ಟಿ ಗ್ರಾಮದ ಗೋಪಾಲಪ್ಪ ವಯಸ್ಸು 45 ವರ್ಷ, ನಾಯಕನಹಟ್ಟಿ ಹೋಬಳಿಯ, ನೆರಲಗುಂಟೆ ಗ್ರಾಮದ ಮಾರಮ್ಮನ ಗುಡಿ ದೇವಸ್ಥಾನದ ಹತ್ತಿರ ಸುಮಾರು 15 ವರ್ಷಗಳಿಂದ ಬಂಡೆ ಕೆಲಸ ಮಾಡುತ್ತಿದ್ದ. ರಾತ್ರಿ ವೇಳೆಯಲ್ಲಿ ಕುಡಿತದ ಚಟದಿಂದ ಆಯಾ ತಪ್ಪಿ ಮಾರಮ್ಮ ಗುಡಿ ಬಂಡೆ ನೀರಿನಲ್ಲಿ ಮುಳಿಗಿ ಮೃತಪಟ್ಟಿದ್ದಾನೆ. ಸ್ಥಳಕ್ಕೆ ಅಗ್ನಿ ಶಾಮಕ ದಳ ಆಗಮಿಸಿ ಮೃತ ಪಟ್ಟ ವ್ಯಕ್ತಿಯನ್ನು ಹೊರ ತೆಗೆಯಲಾಯಿತು. ಮೃತಪಟ್ಟ ವ್ಯಕ್ತಿಗೆ ಇಬ್ಬರು ಮಕ್ಕಳು ಹಾಗೂ ಪತ್ನಿ ಸಾಕಮ್ಮ ಇದ್ದಾರೆ. ಇದು ನಾಯಕನಹಟ್ಟಿ ಪೊಲೀಸ್ ಸ್ಟೇಷನ್‌ನಲ್ಲಿ ಪ್ರಕರಣೆ ದಾಖಲಾಗಿದೆ ಎಂದು ಪಿಎಸ್‌ಐ ದೇವರಾಜ್ ಪ್ರಕಟಣೆಯಲ್ಲಿ ತಿಳಿಸಿದರು.

### ಗೋಡೆ ಮೇಲಿಂದ ಬಿದ್ದು ವ್ಯಕ್ತಿ ಸಾವು

» ಹೊಸದುರ್ಗ

ಹೊಸ ಮನೆಯನ್ನ ಕಟ್ಟುವ ಸಲುವಾಗಿ ಗೋಡೆ ಕೆಲಸ ಮಾಡುತಿದ್ದ ಸಂಧರ್ಬದಲ್ಲಿ ವ್ಯಕ್ತಿಯೋರ್ವ ಆಯಾ ತಪ್ಪಿ ಗೋಡೆಯ ಮೇಲಿಂದ ಬಿದ್ದು ಸಾವನ್ನಪಿರುವ ಘಟನೆ ಪಟ್ಟಣದ ಹೌಸಿಂಗ್ ಬೋರ್ಡ್‌ನಲ್ಲಿ ಬುಧವಾರ ಸಂಭವಿಸಿದೆ.ಮೃತ ವ್ಯಕ್ತಿಯನ್ನ ತಾಲೂಕಿನ ಚನ್ನಸಮುದ್ರ ಗ್ರಾಮದ ಲೇಟ್ ಬಸಪ್ಪ ಎಂಬುವವರ ಪುತ್ರ ಸಿದ್ದಪ್ಪ (38) ಎಂದು ತಿಳಿದು ಬಂದಿದ್ದು ಈತ ಪಟ್ಟಣದ ಹೌಸಿಂಗ್ ಬೋರ್ಡ್‌ನಲ್ಲಿ ಡಾ:ಆಂಜಿನಪ್ಪ ಎಂಬುವವರ ಮನೆಯ ಗೋಡೆಯನ್ನು ಕಟ್ಟುತಿದ್ದ ಸಂಧರ್ಬದಲ್ಲಿ ಆಯಾ ತಪ್ಪಿ ಗೋಡೆಯ ಮೇಲಿಂದ ಕೆಳಗೆ ಬಿದ್ದ ಪರಿಣಾಮ ಸ್ಥಳದಲ್ಲೆ ಸಾವನ್ನಪ್ಪಿದ್ದು ಈ ಬಗ್ಗೆ ಹೊಸದುರ್ಗ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಪಡಿತರ ಧಾನ್ಯ ಹಂಚಿಕೆ

» ದಾವಣಗೆರೆ

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯಲ್ಲಿನ ಪಡಿತರ ಚೀಟಿದಾರರಿಗೆ ಜನವರಿ ಮಾಹೆಗೆ ಅನ್ವಯವಾಗುವಂತೆ ಪಡಿತರ ಧಾನ್ಯ ಹಂಚಿಕೆ ಮಾಡಲಾಗಿದೆ.ಅಂತ್ಯೋದಯ ಪಡಿತರ ಚೀಟಿದಾರರಿಗೆ ಕಾರ್ಡ್‌ಗೆ 21 ಕೆ.ಜಿ ಅಕ್ಕಿ ಮತ್ತು 14 ರಾಗಿ, ಆದ್ಯತಾ ಹಾಗೂ ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ 3 ಕೆ.ಜಿ ಅಕ್ಕಿ ಮತ್ತು ಪ್ರತಿ ಸದಸ್ಯರಿಗೆ 2ಕೆ.ಜಿ ರಾಗಿ ಉಚಿತವಾಗಿ ವಿತರಿಸಲಾಗುತ್ತದೆ. ಹಾಗೂ ಪ್ರತಿ ಕೆ.ಜಿ ಗೆ ರೂ.15ರಂತೆ ಒಪ್ಪಿಗೆ ನೀಡಿದ ಎ.ಪಿ.ಎಲ್ ಏಕ ಸದಸ್ಯ ಪಡಿತರ ಚೀಟಿದಾರರಿಗೆ 5 ಕೆ.ಜಿ, ಎರಡು ಮತ್ತು ಹೆಚ್ಚಿನ ಸದಸ್ಯರನ್ನು ಹೊಂದಿರುವವರಿಗೆ 10 ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು. ಸರ್ಕಾರದ ಗ್ಯಾರಂಟಿ ಯೋಜನೆಯಡಿ 5 ಕೆ.ಜಿ ಅಕ್ಕಿ ಬದಲಾಗಿ ಪಡಿತರ ಚೀಟಿದಾರರಿಗೆ ನೇರ ನಗದು ವರ್ಗಾವಣೆ ಮಾಡುತ್ತಿದ್ದು, ಯಾವುದೇ ರೀತಿಯ ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ಹತ್ತಿರದ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಪರಿಹರಿಸಿಕೊಳ್ಳಬಹುದೆಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರು ಸಿದ್ರಾಮ ಮರಿಹಾಳ್ ತಿಳಿಸಿದ್ದಾರೆ

### 5 ರಂದು ಜನಸ್ಪಂದನ ಕಾರ್ಯಕ್ರಮ

» ಬಳ್ಳಾರಿ

ತಾಲ್ಲೂಕಿನಲ್ಲಿ ಜನವರಿ-2024 ಮಾಹೆಯಲ್ಲಿ ತಾಲ್ಲೂಕು ಮಟ್ಟದ ಜನಸ್ಪಂದನ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರ ಅಧ್ಯಕ್ಷತೆಯಲ್ಲಿ ಜ.05 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನದಲ್ಲಿನ ತಾಲ್ಲೂಕು ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರಾ ಅವರು ತಿಳಿಸಿದ್ದಾರೆ.

---

**ಕಾರ್ಯಾಗಾರದ ಸದುಪಯೋಗ ಪಡೆದುಕೊಳ್ಳುವಲ್ಲಿ ವಿದ್ಯಾರ್ಥಿಗಳು ಮುಂದಾಗಿ: ರವೀಶ್**

# ಸಿಇಟಿ ವಿದ್ಯಾರ್ಥಿ ಮಿತ್ರ ಕಾರ್ಯಾಗಾರ ಉದ್ಘಾಟನೆ

» ಚಳ್ಳಕೆರೆ

ಶಿಕ್ಷಣ ಇಲಾಖೆಯ ಮಹತ್ತರ ಯೋಜನೆಯಾದ ಸಿಇಟಿ ವಿದ್ಯಾರ್ಥಿ ಮಿತ್ರ-2024ತರಬೇತಿಕಾರ್ಯಗಾರವನ್ನು ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಂಡಿದ್ದಕಾಲೇಜು ಪ್ರಾಂಶುಪಾಲ ಎಂ.ರವೀಶ್ ಕಾರ್ಯಗಾರವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿದರು.

ಪ್ರಸ್ತುತ ಇಂದಿನ ಶೈಕ್ಷಣಿಕ ಬದಲಾವಣೆಗಳನ್ನು ಅವಲೋಕಿಸಿದಾಗ ವಿದ್ಯಾರ್ಥಿಗಳು ಇನ್ನೂ ಹೆಚ್ಚಿನ ನೈಪುಣ್ಯತೆ ಪಡೆಯುವ ಅವಶ್ಯಕತೆ ಇದೆ. ಈ ನಿಟ್ಟಿನಲ್ಲಿ ಸಿಇಟಿ ವಿದ್ಯಾರ್ಥಿ ಮಿತ್ರ-2024 ತರಬೇತಿ ಕಾರ್ಯಗಾರವನ್ನು ವಿಜ್ಞಾನ ವಿಭಾಗದ ಉಪನ್ಯಾಸಕರಿಗಾಗಿ ಹಮ್ಮಿಕೊಳ್ಳಲಾಗಿದೆ. ವಿಜ್ಞಾನ ಉಪನ್ಯಾಸಕರು ಪೂರ್ಣಪ್ರಮಾಣದಲ್ಲಿ ತರಬೇತಿ ಕಾರ್ಯಗಾರದಲ್ಲಿ ಉಪಸ್ಥಿತರಿದ್ದು,



ಇಲಾಖೆ ನೀಡುವ ಎಲ್ಲಾ ಮಾಹಿತಿಯನ್ನು ಪಡೆದು ಸಿಇಟಿ ವಿದ್ಯಾರ್ಥಿಗಳಿಗೆ ಬೋಧನೆ ಮಾಡಬೇಕಿದೆ. ಇದರಿಂದ ಸಿಇಟಿ ವಿದ್ಯಾರ್ಥಿಗಳಲ್ಲಿರುವ ಪರೀಕ್ಷೆ ಆತಂಕ ದೂರವಾಗಲಿದೆ ಇದರ ಸದುಪಯೋಗ ಪೂರ್ಣಪ್ರಮಾಣದಲ್ಲಿ ಆಗಲಿ ಎಂದು ಆಶಿಸುತ್ತೇನೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಹಿರಿಯ ಉಪನ್ಯಾಸಕ ವಸಂತಕುಮಾರ್, ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಸಿಇಟಿ ಕಾರ್ಯಗಾರ ಒಂದು ವರದಾನವಾಗಲಿದೆ. ಕಾರಣ, ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿ ಕಲಿಕೆಯ ಬಗ್ಗೆ ಹಿಂಜರಿತ ಸಾಮಾನ್ಯವಾಗಿರುತ್ತದೆ. ಇಂತಹ ಕಾರ್ಯಗಾರಗಳಿಂದ ಅವರಲ್ಲಿರುವ ಅನೇಕ ಪ್ರಶ್ನೆಗಳಿಗೆ ಉಪನ್ಯಾಸಕರ ಬೋಧನೆಯ ಮೂಲಕ ಉತ್ತರ ದೊರೆಯಲಿದೆ. ಇಂತಹ ಕಾರ್ಯಗಾರವನ್ನು ಇನ್ನೂ ಹೆಚ್ಚು,ಹೆಚ್ಚು ನಡೆಯಬೇಕು ಎಂದರು.

ಕಾರ್ಯಗಾರದಲ್ಲಿ ಪ್ರಾಂಶುಪಾಲರಾದ ಶಿವಾರೆಡ್ಡಿ, ವೀರೇಶ್, ನರೇಂದ್ರಬಾಬು, ಸಿಇಟಿ ಮಾಸ್ಟರ್ ಟ್ರೈನರ್ ಬಿ.ಶಾಂತಕುಮಾರಿ,ಅಶ್ವತ್ಥರೆಡ್ಡಿ,ಕೋಮಲ, ಪಾಪಣ್ಣ, ಉಮೇಶ್,ಈರಣ್ಣ, ತಿಪ್ಪೇಸ್ವಾಮಿ, ಜಗದೀಶ್ ಸೇರಿದಂತೆ ತಾಲ್ಲೂಕಿನ ಎಲ್ಲಾ ಪದವಿಪೂರ್ವ ಕಾಲೇಜುಗಳ ವಿಜ್ಞಾನ ಉಪನ್ಯಾಸಕರು ಉಪಸ್ಥಿತರಿದ್ದರು.

---

# ಬಡವರಿಗೆ ನ್ಯಾಯ ಒದಗಿಸಿಕೊಟ್ಟಿದ್ದು ಕಾಂಗ್ರೆಸ್

» ನಾಯಕನಹಟ್ಟಿ

ಬಡವರಿಗೆ ಸಾಮಾಜಿಕ ನ್ಯಾಯ ಒದಗಿಸಿಕೊಟ್ಟ ಪಕ್ಷ ಇದ್ದರೆ ಅದು ಕಾಂಗ್ರೆಸ್ ಮಾತ್ರ ಎಂದು ಯ್ಯೂತ್ ಕಾಂಗ್ರೆಸ್ ರಾಜ ಪ್ರಧಾನ ಕಾರ್ಯದರ್ಶಿ ಜಿಲ್ಲಾ ಉಸ್ತುವಾರಿ ಲೋಕಸಭೆಯ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿ ವಿನಯ್ ತಿಮ್ಮಾಪುರ ಹೇಳಿದರು.

ಪಟ್ಟಣದ ಐತಿಹಾಸಿಕ ಪುಣ್ಯಕ್ಷೇತ್ರದ ನಾಯಕನಹಟ್ಟಿ ಶ್ರೀ ಗುರು ತಿಪ್ಪೇರುದ್ರಸ್ವಾಮಿಯ ಆಶೀರ್ವಾದ ಪಡೆದು ನಂತರ ಮಾತನಾಡಿದ ಅವರು ಸರ್ವರಿಗೂ ಸಮಬಾಳು, ಸಮಪಾಲು ಎಂಬ ಸಿದ್ಧಾಂತವನ್ನು ಮೈಗೂಡಿಸಿಕೊಂಡು ಹೋಗುವ ಪಕ್ಷ ಕಾಂಗ್ರೆಸ್ ಆಗಿದ್ದು, ಎಲ್ಲಾ ಜಾತಿ ಧರ್ಮದವರನ್ನು ಸಮಾನವಾಗಿ ಪ್ರೀತಿ ಮಾಡುವವರ ಪಕ್ಷ ಕಾಂಗ್ರೆಸ್ ಆಗಿದೆ. ಹಾಗಾಗಿ ನನ್ನ ಧರ್ಮ ಕಾಂಗ್ರೆಸ್ ಆಗಿದೆ. ಯಾರೂ ಹುಟ್ಟುವಾಗ ಅರ್ಜಿ ಹಾಕಿಕೊಂಡು ಹುಟ್ಟಿಲ್ಲ. ದೇವರು ಕೊಟ್ಟ ಜನ್ಮ ನಮ್ಮದಾಗಿದ್ದು, ಇಲ್ಲಿ ನಾವೆಲ್ಲ ಒಂದೇ ಎನ್ನುವ ಎಲ್ಲಾರನ್ನು ಪ್ರೀತಿಸುವ ಮನೋಧರ್ಮ ನಮ್ಮದಾಗಿರಬೇಕು. ಜಾತಿ ಧರ್ಮದ ಸಂಘರ್ಷ ಬಿಟ್ಟು ಮನುಷ್ಯತ್ವವುಳ್ಳ ಮನುಜ ಧರ್ಮ ನಮ್ಮದಾಗಬೇಕು. ಇದನ್ನೆ ತನ್ನ ಸಿದ್ಧಾಂತದಲ್ಲಿ ಅಳವಡಿಸಿಕೊಂಡು ಅದನ್ನು ಪಾಲಿಸಿಕೊಂಡು ಬರುತ್ತಿರುವ ಪಕ್ಷವೆಂದರೆ ಅದು ಕಾಂಗ್ರೆಸ್ ಮಾತ್ರ ಎಂದು ಅವರು ಹೇಳಿದರು.

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಜ್ಯದಲ್ಲಿ ಉತ್ತಮವಾದ ಆಡಳಿತ ನೀಡುತ್ತ ಬಂದಿರುತ್ತಾರೆ. ಕಾಂಗ್ರೆಸ್ ಸರ್ಕಾರ ಜಾರಿಗೆ



ತಂದಿರುವ ಗ್ಯಾರಂಟಿ ಯೋಜನೆಗಳಿಂದ ಬಡವರು ನೆಮ್ಮದಿಯಿಂದ ಜೀವನ ನಡೆಸುತ್ತಿದ್ದಾರೆ. ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಯುವಕರು ಕಾಂಗ್ರೆಸ್ ಕಡೆ ಒಲವು ತೋರಬೇಕು ಎಂದು ತಿಳಿಸಿದರು. ಎಲ್ಲಾ ವರ್ಗದ ಜನರಿಗೂ ಅಧಿಕಾರ ನೀಡುತ್ತ ಪಕ್ಷ ಕಾಂಗ್ರೆಸ್ ಆಗಿದೆ. ಬಿಜೆಪಿ ಕೇಂದ್ರ ಹಾಗೂ ರಾಜ್ಯದ ನಾಯಕರು ಸುಳ್ಳು ಭರವಸೆಗಳನ್ನು ನೀಡಿ ಜನರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ವರ್ಷಕ್ಕೆ ಎರಡು ಕೋಟಿ ಉದ್ಯೋಗ ನೀಡುತ್ತೇನೆ ಎಂದು ಅಧಿಕಾರ ಹಿಡಿದವರು ಇಲ್ಲಿಯ ತನಕ ಒಂದು ಉದ್ಯೋಗವನ್ನು ಸೃಷ್ಟಿಸಿಲ್ಲ. ಆದ್ದರಿಂದ ಬಿಜೆಪಿಯ ಸುಳ್ಳು ಭರವಸೆಗಳಿಗೆ ನಂಬಿ ಮತ ಹಾಕದೆ ನುಡಿದಂತೆ ನಡೆದ ಕಾಂಗ್ರೆಸ್ ಬೆಂಬಲಿಸಬೇಕೆಂದು ಮನವಿ ಮಾಡಿದರು.ಈ ಸಂದರ್ಭದಲ್ಲಿ ಉಪಸ್ಥಿತರಾದ ಪಟ್ಟಣ ಪಂಚಾಯಿತಿ ಸದಸ್ಯ ಸೈಯದ್ ಅನ್ವರ್, ಮಾಜಿ ಪ.ಪಂ ಉಪಾಧ್ಯಕ್ಷರಾದ ಕೃಷ್ಣಮೂರ್ತಿ, ಯ್ಯೂತ್ ಕಾಂಗ್ರೆಸ್ ಅಧ್ಯಕ್ಷ ಹರೀಶ್ ಉಳ್ಳಾರ್ತಿ, ಹಾಗೂ ಕಾಂಗ್ರೆಸ್ ಪಕ್ಷದ ಯುವಕರು ಇದ್ದರು.



ಹೊಸದುರ್ಗ ತಾಲೂಕಿನ ಸಾಣೇಹಳ್ಳಿ ತರಳಬಾಳು ಶಾಖಾ ಮಠಕ್ಕೆ ದಾವಣಗೆರೆ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಬುಧವಾರ ಭೇಟಿ ಕೊಟ್ಟು ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಶ್ರೀಗಳ ಆಶೀರ್ವಾದ ಪಡೆದುಕೊಂಡರು.

---

# ಮಾನವನ ಆಚರಣೆಯಲ್ಲಿವೆ ಧರ್ಮದ ಉಳಿವು ಅಳಿವು



» ಕೊಲನಪಾಕ (ತೆಲಂಗಾಣ)

ಮನುಷ್ಯ ಜೀವನ ಪವಿತ್ರ ಪಾವನ. ಅರಿತು ಬಾಳುವುದರಲ್ಲಿ ಬದುಕಿನ ಶ್ರೇಯಸ್ಸಿದೆ. ಧರ್ಮದ ಉಳಿವು ಮತ್ತು ಅಳಿವು ಮನುಷ್ಯನ ಆಚರಣೆಯಲ್ಲಿವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಕೊಲನಪಾಕ ಸ್ವಯಂಭು ಶ್ರೀ ಸೋಮೇಶ್ವರ ಕ್ಷೇತ್ರದಲ್ಲಿ ಜರುಗಿದ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಪ್ರಾಣ ಯೌವನ ಕಾಲ ಒಮ್ಮೆ ಕಳೆದರೆ ಮತ್ತೆಂದೂ ತಿರುಗಿ ಬರಲಾರವು. ಸದ್ವಿದ್ಯೆ, ಉತ್ತಮ ಸಂಬಂಧ ಮತ್ತು ಆದರ್ಶ ಸ್ನೇಹ ಯಾವಾಗಲೂ ನಮ್ಮೊಂದಿಗೆ ಇದ್ದರೆ ಬಾಳೆಲ್ಲ ಸುಖಮಯ. ಚಿಂತೆ ಚಿಂತನೆಗೊಂಡಾಗ ಬಾಳು ಉಜ್ವಲಗೊಳ್ಳಲು ಸಾಧ್ಯ. ಮನುಷ್ಯನಲ್ಲಿ ಒಳ್ಳೆಯ ಮತ್ತು ಕೆಟ್ಟ ಗುಣ ಎರಡೂ ಇವೆ. ಒಳ್ಳೆಯವರ ಒಡನಾಟದಲ್ಲಿ ಬಾಳಿದರೆ ಜೀವನ ವಿಕಾಸಗೊಳ್ಳುವುದು.

ದುರ್ಜನರ ಒಡನಾಟದಲ್ಲಿ ಬಾಳಿದರೆ ಬದುಕು ಸರ್ವನಾಶಗೊಳ್ಳುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಶಿವಾದ್ವೈತ ಜ್ಞಾನ ಸಂಪತ್ತು ಜೀವನ ವಿಕಾಸಕ್ಕೆ ಮೂಲಾಧಾರವಾಗಿದೆ ಎಂದರು.

ಮೇಹಕರಹಿರೇಮಠದರಾಜೇಶ್ವರ ಶ್ರೀಗಳು ಮಾತನಾಡಿ ಮನಸ್ಸು ಇದ್ದರೆ ಮಾರ್ಗ ಯಾವಾಗಲೂ ಇದ್ದೇ ಇರುತ್ತದೆ. ಮನುಷ್ಯ ಭೌತಿಕ ಸಂಪತ್ತಿನ ಜೊತೆಗೆ ಆಧ್ಯಾತ್ಮ ಜ್ಞಾನವನ್ನು ಸಂಪಾದಿಸಿ ಜೀವನ ಸಾರ್ಥಕಗೊಳಿಸಬೇಕಾಗಿದೆ ಎಂದರು. ಮಳಲಿ ಸಂಸ್ಥಾನ ಮಠದ ಡಾ. ನಾಗಭೂಷಣ ಶ್ರೀಗಳು, ಮಂಗಲಗಿ ಮಠದ ಡಾ|| ಸೋಮನಾಥ ಶ್ರೀಗಳು, ತೊಟ್ನಳ್ಳಿ ಡಾ.ತ್ರಿಮೂರ್ತಿ ಶ್ರೀಗಳು, ಲಿಂಗಸುಗೂರು ಮಾಣಿಕ್ಯೇಶ್ವರಿ ಆಶ್ರಮದ ಮಾತಾ ನಂದಿಕೇಶ್ವರಿ ಅಮ್ಮನವರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಸ್ಮರಣಿಕೆಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಬಿಡುಗಡೆ ಮಾಡಿದರು.

ಹೈದರಾಬಾದಿನ ವೀರಶೈವ ಸಮಾಜದ ಅಧ್ಯಕ್ಷ ವೀರಮಲ್ಲೇಶ, ಜಂಗಮ ಸಮಾಜದ ಅಧ್ಯಕ್ಷ ವಿಶ್ವಂ, ಅಣ್ಣಾರಾವ ಬಿರಾದಾರ, ಶಿವಶರಣಪ್ಪ ಸೀರಿ, ಗುರುಪಾದಪ್ಪ ಕಿಣಗಿ ಪಾಲ್ಗೊಂಡಿದ್ದರು. ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶ್ರೀಗಳುನಿರೂಪಿಸಿದರು.ಗಿರಿಯಪ್ಪ ಮುತ್ಯಾ ಅವರು ಅನ್ನದಾಸೋಹ ಸೇವೆ ಸಲ್ಲಿಸಿದರು.ಪ್ರಾತ:ಕಾಲ ಶ್ರೀ ಸೋಮೇಶ್ವರ ಮಹಾಲಿಂಗಕ್ಕೆ ಅಭಿಷೇಕ, ಚಂಡಿಕಾಂಬಾ ದೇವಿಗೆ ಕುಂಕುಮಾರ್ಚನೆ ಜರುಗಿತು.

ಲೋಕಕಲ್ಯಾಣಕ್ಕಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆ ನೆರವೇರಿಸಿ ಶುಭ ಹಾರೈಸಿದರು.

---

## ಪ್ರಮುಖ ಸುದ್ದಿ

**ಎಸ್‌ಆರ್‌ಎಸ್ ವಿದ್ಯಾಸಂಸ್ಥೆಯ ಮಹಾನ್ ಸಾಧನೆ**

# ರಾಜ್ಯಮಟ್ಟದ ಸಪೆಕ್ ಟೆಕ್ರ ಪಂದ್ಯದಲ್ಲಿ ಗೆಲುವು: ಲಿಂಗಾರೆಡ್ಡಿ

» ಚಳ್ಳಕೆರೆ

ನಗರದ ಪ್ರತಿಷ್ಠಿತ ಎಸ್‌ಆರ್‌ಎಸ್ ವಿದ್ಯಾಸಂಸ್ಥೆ ಕೇವಲ ಶೈಕ್ಷಣಿಕ ಕ್ಷೇತ್ರದಲ್ಲಿ ಮಾತ್ರ ಪ್ರಗತಿಯನ್ನು ದಾಖಲಿಸದೆ ಕ್ರೀಡೆಯಲ್ಲೂ ಸಹ ರಾಷ್ಟ್ರ ಮತ್ತು ರಾಜ್ಯಮಟ್ಟದಲ್ಲಿ ಗೆಲುವು ಸಾಧಿಸುವ ಮೂಲಕ ಅಪ್ರತಿಮ ಸಾಧನೆ ಮಾಡಿದ್ದು, ಈ ಗೆಲುವಿಗೆ ಕಾರಣಕರ್ತರಾದ ವಿದ್ಯಾರ್ಥಿಗಳನ್ನು, ವಿದ್ಯಾರ್ಥಿಗಳಿಗೆ ತರಬೇತಿ ನೀಡಿದ ದೈಹಿಕ ನಿರ್ದೇಶಕರನ್ನು ಅಭಿನಂದಿಸುವುದಾಗಿ ವಿದ್ಯಾಸಂಸ್ಥೆಯ ಅಧ್ಯಕ್ಷ ಬಿ.ಎ.ಲಿಂಗಾರೆಡ್ಡಿ ತಿಳಿಸಿದ್ದಾರೆ.

ಅವರು, ಗುರುವಾರ ಕಾಲೇಜಿನ ಸಭಾಂಗಣದಲ್ಲಿ ವಿಜೇತ ವಿದ್ಯಾರ್ಥಿಗಳನ್ನು ಅಭಿನಂಧಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ರಾಷ್ಟ್ರೀಯ ಜೂನಿಯರ್ ಖೋ-ಖೋ ವಿಭಾಗ ಹಾಗೂ ರಾಜ್ಯ ಮಟ್ಟದ ಸೆಪೆಕ್ ಟೆಕ್ರ



ಪಂದ್ಯದಲ್ಲಿ ವಿಜೇತರಾದ ವಿದ್ಯಾರ್ಥಿಗಳನ್ನು ಅಭಿನಂದಿಸಿ ಮಾತನಾಡಿದರಲ್ಲದೆ, ವಿದ್ಯಾರ್ಥಿಗಳಿಗೆ ಸೂಕ್ತ ತರಬೇತಿ ನೀಡಿದ ದೈಹಿಕ ಶಿಕ್ಷಕ ಅಶೋಕ್ ಮೋಹಿತೆ ಹಾಗೂ ಶಿಕ್ಷಕರನ್ನು ಅಭಿನಂದಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕಾಲೇಜಿನ ಆಡಳಿತಾಧಿಕಾರಿ ಪಿ.ಎನ್. ಕೃಷ್ಣಪ್ರಸಾದ್ ಮಾಹಿತಿ ನೀಡಿ, ಕಳೆದ ಡಿ.26ರಿಂದ30ವರೆಗೂ ಛತ್ತೀಸ್‌ಗಡದ ರಾಯಪುರದಲ್ಲಿ 42ನೇ ರಾಷ್ಟ್ರೀಯ ಜೂನಿಯರ್ ಖೋ-ಖೋ ಪಂದ್ಯಾವಳಿ ನಡೆದಿದ್ದು, ನಮ್ಮ ಕಾಲೇಜಿನ ತಂಡ ರಾಷ್ಟ್ರೀಯ ಮಟ್ಟದಲ್ಲಿ ಕಂಚಿನ ಪದಕ ಪಡೆದಿದೆ. ವಿದ್ಯಾರ್ಥಿಗಳಾದ ಗುರುರಾಜು, ಸಾತ್ವಿಕ್‌ರವರ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಕಳೆದ ಡಿ.13 ಮತ್ತು 14ರಂದು ದಾವಣಗೆರೆಯ ಬಾಪೂಜಿ ದೈಹಿಕ ಶಿಕ್ಷಣ ಮಹಾವಿದ್ಯಾಲಯದ ಮೈದಾನದಲ್ಲಿ ನಡೆದ ರಾಜ್ಯಮಟ್ಟದ ಸಪೆಕ್‌ಟೆಕ್ರ ಪಂದ್ಯದಲ್ಲಿ ನಮ್ಮ ಕಾಲೇಜಿನ ವಿದ್ಯಾರ್ಥಿಗಳಾದ ಎನ್.ಸಂಜನ, ವನಶ್ರೀ, ಎಸ್.ತೇಜಸ್ವಿನಿ ಬಾಲಕಿಯರ ವಿಭಾಗದಲ್ಲಿ ದ್ವಿತೀಯ ಬಹುಮಾನವನ್ನು, ಬಾಲಕರ ವಿಭಾಗದಲ್ಲಿ ಪುನೀತ್ ದ್ವಿತೀಯ ಸ್ಥಾನವನ್ನು ಪಡೆದಿರುತ್ತಾರೆ.

ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿ ಸುಜಾತಲಿಂಗಾರೆಡ್ಡಿ, ಪ್ರಾಂಶುಪಾಲ ಸತ್ಯನಾರಾಯಣ, ಉಪನ್ಯಾಸಕರಾದ ರಮ್ಯ, ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T